ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 249 RNI Number : KNKAN/25/A2770 21-09-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:249 ರಾಯಚೂರು 21-09-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಇಂದಿನಿಂದ 3 ದಿನಗಳ ವಿಧಾನ ಮಂಡಲದ ವಿಶೇಷ ಅಧಿವೇಶನ

ಬೆಂಗಳೂರು,ಸೆ.20- ರಾಜ್ಯದಲ್ಲಿ ತಲೆದೋರಿರುವ ತೀವ್ರ ಬರ ಪರಿಸ್ಥಿತಿ, ರೈತರ ಜ್ವಲಂತ ಸಮಸ್ಯೆಗಳು ಹಾಗೂ ಪಶ್ಚಿಮಘಟ್ಟ ರಕ್ಷಣೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಹೊರಡಿಸಿರುವ ಕಸ್ತೂರಿರಂಗನ್ ವರದಿ ಕರಡು ಅಧಿಸೂಚನೆ ಕುರಿತು ಚರ್ಚೆ ನಡೆಸಲು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮೂರು ದಿನಗಳ ವಿಶೇಷ ಅಧಿವೇಶನ ನಾಳೆಯಿಂದ ಪ್ರಾರಂಭವಾಗಲಿದೆ.

ಈ ಹಿಂದೆ ನಡೆದ ಅಧಿವೇಶನದ ರಾಜಕೀಯ ಗದ್ದಲ ಹಾಗೂ ರಾಜ್ಯದ ಪ್ರಸ್ತುತ ವಾಸ್ತವಿಕ ಸ್ಥಿತಿಗತಿಗಳ ಹಿನ್ನೆಲೆಯಲ್ಲಿ ಈ ವಿಶೇಷ ಅಧಿವೇಶನ ಅತ್ಯಂತ ಮಹತ್ವ ಪಡೆದುಕೊಂಡಿದೆ.

ಸಾಮಾನ್ಯ ಅಧಿವೇಶನಕ್ಕಿಂತ ವಿಭಿನ್ನವಾಗಿ ಈ ವಿಶೇಷ ಅಧಿವೇಶನದಲ್ಲಿ ರಾಜ್ಯದ ಎರಡು ಪ್ರಮುಖ ಸವಾಲುಗಳಾದ ಬರ ಪರಿಸ್ಥಿತಿ ಮತ್ತು ಕಸ್ತೂರಿರಂಗನ್ ವರದಿ ಕೇಂದ್ರಬಿಂದುವಾಗುವ ನಿರೀಕ್ಷೆಯಿದೆ.

ಡಾ.ಕೆ.ಕಸ್ತೂರಿ ರಂಗನ್ ನೇತೃತ್ವದ ಉನ್ನತ ಮಟ್ಟದ ತಂಡ ನೀಡಿದ ವರದಿಯನ್ನಾಧರಿಸಿ ಕೇಂದ್ರ ಸರ್ಕಾರ ಹೊರಡಿಸಿರುವ ಕರಡು ಅಧಿಸೂಚನೆಯಿಂದ ಮಲೆನಾಡು ಹಾಗೂ ಕರಾವಳಿ ಭಾಗದ ಜನರಲ್ಲಿ ಆತಂಕ ವ್ಯಕ್ತವಾಗಿದೆ. ವರದಿಯ ಸಾಧಕ-ಬಾಧಕಗಳ ಬಗ್ಗೆ ಸಮಗ್ರವಾಗಿ ಚರ್ಚಿಸಿ, ರಾಜ್ಯದ ಸ್ಪಷ್ಟ ನಿಲುವನ್ನು ನಿರ್ಣಯದ ಮೂಲಕ ಕೇಂದ್ರಕ್ಕೆ ತಲುಪಿಸುವುದು ಈ ಅಧಿವೇಶನದ ಮುಖ್ಯ ಉದ್ದೇಶವಾಗಿದೆ.



ಮುಂಗಾರು ಅಭಾವದಿಂದಾಗಿ ರಾಜ್ಯದ ವಿವಿಧೆಡೆ ಬೆಳೆಗಳು ಒಣಗುತ್ತಿದ್ದು, ಕುಡಿಯುವ ನೀರು, ಜಾನುವಾರುಗಳ ಮೇವು ಹಾಗೂ ವಿದ್ಯುತ್ ಅಭಾವ ಗಂಭೀರ ಸ್ವರೂಪ ಪಡೆದುಕೊಂಡಿದೆ. ಕೃಷಿ ವಲಯ ಎದುರಿಸುತ್ತಿರುವ ಈ ಬಿಕ್ಕಟ್ಟಿಗೆ ಪರಿಹಾರ ಕಂಡುಕೊಳ್ಳುವ ಕುರಿತು ಸದನದಲ್ಲಿ ಚರ್ಚೆ ನಡೆಯಲಿದೆ.

ವಿಶೇಷ ಅಧಿವೇಶನದಲ್ಲಿ ಬೆಳೆ ನಷ್ಟಕ್ಕೆ ಪರಿಹಾರ, ಸಾಲದ ಒತ್ತಡ, ಜಾನುವಾರುಗಳಿಗೆ ಮೇವು, ಕುಡಿಯುವ ನೀರು, ವಿದ್ಯುತ್ ಪೂರೈಕೆ, ಕೇಂದ್ರದಿಂದ ಬರಬೇಕಿರುವ ಬರ ಪರಿಹಾರ ಸೇರಿದಂತೆ ರೈತರ ಬದುಕಿಗೆ ನೇರವಾಗಿ ಸಂಬಂಧಿಸಿದ ಹಲವು ವಿಚಾರಗಳು ಪ್ರಸ್ತಾಪವಾಗುವ ಸಾಧ್ಯತೆಯಿದೆ.

ನಾಳೆಯಿಂದ ಸೆ.23ರವರೆಗೆ ನಡೆಯಲಿರುವ ವಿಶೇಷ ಅಧಿವೇಶನವನ್ನು ರೈತರ ಸಮಸ್ಯೆ ಮತ್ತು ಬರ ಪರಿಸ್ಥಿತಿಯ ಚರ್ಚೆಗೆ ಬಳಸಲಾಗುತ್ತದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್‌ಕೂಡ ಹೇಳಿದ್ದಾರೆ. ಕೇಂದ್ರ ಸರ್ಕಾರ ರೈತರ ಸಾಲಮನ್ನಾ ವಿಚಾರದಲ್ಲೂ ಕ್ರಮ ಕೈಗೊಳ್ಳಬೇಕು ಎಂಬ ಬೇಡಿಕೆಯನ್ನೂ ಅವರು ಮುಂದಿಟ್ಟಿದ್ದಾರೆ.

ವಿಶೇಷ ಅಧಿವೇಶನದ ಮತ್ತೊಂದು ಪ್ರಮುಖ ವಿಚಾರ ಕಸ್ತೂರಿರಂಗನ್ ವರದಿ. ಕೇಂದ್ರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು ಜುಲೈ 27ರಂದು ಪಶ್ಚಿಮಘಟ್ಟ ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶವೆಂದು ಗುರುತಿಸುವ ಸಂಬಂಧ ಏಳನೇ ಕರಡು ಅಧಿಸೂಚನೆ ಹೊರಡಿಸಿದೆ. ಕರಡು ಪ್ರಸ್ತಾವನೆಯಡಿ ಕರ್ನಾಟಕದ 10 ಜಿಲ್ಲೆಗಳ ವ್ಯಾಪ್ತಿಯ 20,668 ಚದರ ಕಿ.ಮೀ. ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶವಾಗಿ ಗುರುತಿಸುವ ಪ್ರಸ್ತಾವವಿದೆ.

ಈ ಪ್ರಸ್ತಾವನೆಯ ಪರಿಣಾಮವಾಗಿ ಮಲೆನಾಡು ಮತ್ತು ಪಶ್ಚಿಮಘಟ್ಟಕ್ಕೆ ಹೊಂದಿಕೊಂಡಿರುವ ಪ್ರದೇಶಗಳಲ್ಲಿನ ಕೃಷಿ, ವಸತಿ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸ್ಥಳೀಯರ ಜೀವನೋಪಾಯದ ಮೇಲೆ ಏನು ಪರಿಣಾಮ ಬೀರುತ್ತದೆ ಎಂಬುದು ಪ್ರಮುಖ ಚರ್ಚೆಯ ವಿಷಯವಾಗಲಿದೆ. ರಾಜ್ಯ ಸರ್ಕಾರ ಈಗಾಗಲೇ ಕರಡು ಅಧಿಸೂಚನೆಗೆ ಆಕ್ಷೇಪಣೆ ಸಲ್ಲಿಸುವ ನಿಲುವು ವ್ಯಕ್ತಪಡಿಸಿದೆ.

ಇತ್ತೀಚೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಲೆನಾಡು ಭಾಗದಲ್ಲಿ ಕಸ್ತೂರಿರಂಗನ್ ವರದಿಯಿಂದ ಪರಿಣಾಮ ಬೀರುವ ಪ್ರದೇಶಗಳ ಕುರಿತು ಸ್ಥಳೀಯ ವಾಸ್ತವಾಂಶ ಆಧಾರಿತ ಸಮೀಕ್ಷೆಯ ಅಗತ್ಯವನ್ನೂ ಪ್ರಸ್ತಾಪಿಸಿದ್ದಾರೆ.

ಅದೇ ರೀತಿ ಬೆಂಗಳೂರು-ಮೈಸೂರು ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ ಯೋಜನೆಗೆ ಸಂಬಂಧಿಸಿದ ಆರೋಪಗಳು, ಬಿಡದಿ ಉಪನಗರ ಯೋಜನೆ ಸೇರಿದಂತೆ ಈ ಹಿಂದೆ ಸಮರ್ಪಕವಾಗಿ ಚರ್ಚೆಯಾಗದ ವಿಷಯಗಳನ್ನು ಪ್ರತಿಪಕ್ಷಗಳು ಪ್ರಸ್ತಾಪಿಸುವ ಸಾಧ್ಯತೆಯೂ ಇದೆ. ಇದರಿಂದ ಮೂರು ದಿನಗಳ ವಿಶೇಷ ಅಧಿವೇಶನ ಕೇವಲ ನಿರ್ಣಯ ಕೈಗೊಳ್ಳುವ ವೇದಿಕೆಯಾಗದೆ, ಸರ್ಕಾರ-ಪ್ರತಿಪಕ್ಷಗಳ ನಡುವೆ ನೀತಿ ಮತ್ತು ಆಡಳಿತದ ಕುರಿತು ತೀವ್ರ ವಾಗ್ವಾದಕ್ಕೂ ಕಾರಣವಾಗುವ ಸಾಧ್ಯತೆಯಿದೆ.

ಒಟ್ಟಿನಲ್ಲಿ, ಒಂದೆಡೆ ರಾಜ್ಯವನ್ನು ಕಾಡುತ್ತಿರುವ ಬರ ಮತ್ತು ರೈತರ ಸಂಕಷ್ಟ, ಮತ್ತೊಂದೆಡೆ ಪಶ್ಚಿಮಘಟ್ಟಗಳ ಪರಿಸರ ಸಂರಕ್ಷಣೆ ಹಾಗೂ ಮಲೆನಾಡಿನ ಜನರ ಜೀವನೋಪಾಯದ ಪ್ರಶ್ನೆ ಈ ಎರಡನ್ನೂ

3ನೇ ಪುಟ.....

ಗಣೇಶ ವಿಸರ್ಜನೆ ಅಂಗವಾಗಿ ಸಭೆ

ಯಾವುದೇ ದುರ್ಘಟನೆಗಳು ನಡೆಯದಂತೆ ಜಿಲ್ಲಾಡಳಿತಕ್ಕೆ ಸಹಕರಿಸಿ: ಜಿಲ್ಲಾಧಿಕಾರಿ

ರಾಯಚೂರು,ಸೆ.20

ರಾಯಚೂರು ಜಿಲ್ಲೆಯಲ್ಲಿ ಗಣೇಶ ವಿಸರ್ಜನೆ ಸಮಯದಲ್ಲಿ ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಎಲ್ಲ ಗಜಾನನ ಮಂಡಳಿಯವರು ಪಾಲಿಸುವ ಮೂಲಕ ಶಾಂತಿಯುತ ಹಾಗೂ ಯಾವುದೇ ದುರ್ಘಟನೆಗಳ ನಡೆಯದಂತೆ ನೋಡಿಕೊಳ್ಳುವ ಮೂಲಕ ಜಿಲ್ಲಾಡಳಿತಕ್ಕೆ ಸಹಕರಿಸಿಬೇಕೆಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಹೇಳಿದರು.

ಸೆಪ್ಟೆಂಬರ್ 20ರ ರವಿವಾರ ದಂದು ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಶ್ರೀ ಗೌರಿ ಗಣೇಶ ವಿಸರ್ಜನೆ ಕುರಿತು ನಡೆದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ದುರ್ಘಟನೆ ನಡೆದಂತೆ ಸುಮಾರು ಮೂರು-ನಾಲ್ಕು ತಿಂಗಳಿಂದ ಎಲ್ಲರೂ ಕಷ್ಟಪಟ್ಟು ಒಳ್ಳೆಯ ರೀತಿಯಲ್ಲಿ, ಚೆನ್ನಾಗಿ ಮತ್ತು ಭಿನ್ನವಾಗಿ ಉತ್ಸವವನ್ನು ನಡೆಸಲು ಶ್ರಮಿಸುತ್ತಿದ್ದಾರೆ. ಆದರೆ ದುರ್ಘಟನೆಗಳು ಸಂಭವಿಸಿದಾಗ ಎಲ್ಲರ ಮನಸ್ಸಿಗೂ ನೋವಾಗುತ್ತದೆ. ವಿಸರ್ಜನಾ ಮೆರವಣಿಗೆಯ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಟ್ರ್ಯಾಕ್ಟರ್‌ಗಳನ್ನು ಬಳಸುವಾಗ ಅವುಗಳಲ್ಲಿ ಉತ್ತಮ ಡ್ರೈವರ್‌ಗಳನ್ನು ಹಾಕಿ, ಒಂದಕ್ಕಿಂತ ಹೆಚ್ಚು ಗಣಪತಿಯನ್ನು ಅದರ ಮೇಲೆ ಕೂರಿಸಬಾರದು ಎಂದು ಸಂಬಂಧಿಸಿದ ಗಣೇಶ ಮಂಡಳಿಯವರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಆರ್.ಟಿ.ಒ. ಹಾಗೂ ಸಾರಿಗೆ ಇಲಾಖೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಪೊಲೀಸ್ ಇಲಾಖೆ ಹಾಗೂ ಕಾರ್ಪೊರೇಷನ್ ಇಲಾಖೆಗಳಿಗೆ ಈ ಕುರಿತು ಮಾಹಿತಿ ನೀಡಲಾಗಿದೆ. ದಯವಿಟ್ಟು ಯುವಕರು ಟ್ರಾಕ್ಟರ್ ಸುತ್ತಮುತ್ತ ಓಡಾಡುವುದು, ಮೆರವಣಿಗೆಯಲ್ಲಿ ಜೊತೆಯಾಗಿ ಸಾಗುವುದನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಮಕ್ಕಳನ್ನು ವಿಸರ್ಜನೆಗೆ ಕರೆದುಕೊಂಡು ಹೋಗುವಾಗ ಅವರ ಸುರಕ್ಷತೆಗೆ ಆದ್ಯತೆ ನೀಡಬೇಕು. ಸೌಂಡ್ ಸಿಸ್ಟಮ್ ಬಳಕೆಯಲ್ಲಿ ಸಾಮಾನ್ಯ ಸಮಯದಲ್ಲೂ ನಿಯಮಗಳನ್ನು ಪಾಲಿಸಬೇಕು. ಅತಿಯಾದ ಶಬ್ದದಿಂದ ವಯಸ್ಸಾದವರಿಗೆ ಮತ್ತು ರೋಗಿಗಳಿಗೆ ತೊಂದರೆಯಾಗದಂತೆ ಎಚ್ಚರಿಕೆ ವಹಿಸಬೇಕು. ಸಂಸ್ಕೃತಿ ಮತ್ತು ಕಲಾ ಪ್ರಕಾರಗಳಿಗೆ ತೊಂದರೆಯಾಗದಂತೆ, ಭಜನೆಗಳು ಮತ್ತು ಲೈಟ್ ಮ್ಯೂಸಿಕ್ ಮೂಲಕ ಉತ್ಸವವನ್ನು ಶಾಂತಿಯುತವಾಗಿ ನಡೆಸಬೇಕು ಎಂದರು.

ಗಣೇಶ ವಿಸರ್ಜನೆಗಾಗಿ ರಾಯ

3ನೇ ಪುಟ.....

ಕಲ್ಲೂರು ಸಮೀಪ ಭೀಕರ ರಸ್ತೆ ಅಪಘಾತ: ನಾಲ್ವರಿಗೆ ಗಂಭೀರ ಗಾಯ

ಸಿರವಾರ. ಸೆ.20: ತಾಲೂಕಿನ ಕಲ್ಲೂರು ಗ್ರಾಮದ ಹೊರವಲಯದಲ್ಲಿ ಮಾನ್ವಿ-ರಾಯಚೂರು ಸಂಪರ್ಕಿಸುವ ರಾಜ್ಯ ಹೆದ್ದಾರಿ-23ರ ಭಾನುವಾರ ಬೆಳಗ್ಗೆ ಸಂಭವಿಸಿದೆ. ರಸ್ತೆ ಅಪಘಾತದಲ್ಲಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಭಾನುವಾರ ಬೆಳಗ್ಗೆ ಸುಮಾರು 8.30ರ ವೇಳೆಗೆ -17--8615 ನೋಂದಣಿ ಸಂಖ್ಯೆಯ ಕಾರು ಮಾನ್ವಿಯಿಂದ ರಾಯಚೂರು ಕಡೆಗೆ ಸಂಚರಿಸುತ್ತಿದ್ದ ವೇಳೆ ಕಲ್ಲೂರು ಸಮೀಪ ರಸ್ತೆ ಮಧ್ಯಭಾಗದಲ್ಲಿದ್ದ ಬೀದಿ ದೀಪದ ಕಂಬಕ್ಕೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ. ಡಿಕ್ಕಿಯ ರಭಸಕ್ಕೆ ಕಾರಿನ ಮುಂಭಾಗ ತೀವ್ರವಾಗಿ ಜಖಂಗೊಂಡಿದ್ದು, ಅದರಲ್ಲಿದ್ದ ನಾಲ್ವರು ಗಾಯಗೊಂಡಿದ್ದಾರೆ.

ಅಪಘಾತದ ಬಳಿಕ ಸ್ಥಳೀಯರು ಗಾಯಾಳುಗಳ ನೆರವಿಗೆ ಧಾವಿಸಿದ್ದು, ಅವರನ್ನು ಚಿಕಿತ್ಸೆ ಗಾಗಿ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಎಂದು ಸ್ಥಳೀಯರಿಂದ ಮಾಹಿತಿ ಲಭ್ಯವಾಗಿದೆ. ಗಾಯಗೊಂಡವರ ಹೆಸರು, ವಿಳಾಸ ಹಾಗೂ ವಯಸ್ಸಿ ನ ವಿವರಗಳು ಇನ್ನೂ ಖಚಿತವಾಗಿಲ್ಲ. ಅಪಘಾತದ



ರಭಸಕ್ಕೆ ರಸ್ತೆ ಮಧ್ಯದಲ್ಲಿದ್ದ ಬೀದಿ ದೀಪದ ಕಂಬ ಬಾಗಿದ್ದು, ಅಪಘಾತಕ್ಕೀಡಾದ ಕಾರು ಕೂಡ ಸ್ಥಳದಲ್ಲೇ ಉಳಿದಿರುವುದರಿಂದ ರಾಜ್ಯ ಹೆದ್ದಾರಿಯಲ್ಲಿ ಸಂಚರಿಸುವ ಇತರೆ ವಾಹನಗಳಿಗೆ ತೊಂದರೆಯಾಗುವ ಸಾಧ್ಯತೆ ಉಂಟಾಗಿದೆ.

ಮಾನ್ವಿ-ರಾಯಚೂರು ರಾಜ್ಯ ಹೆದ್ದಾರಿ-23 ಪ್ರಮುಖ ಸಂಚಾರ ಮಾರ್ಗವಾಗಿರುವುದರಿಂದ

3ನೇ ಪುಟ.....

ಮೃತ ಮಕ್ಕಳ ಕುಟುಂಬಕ್ಕೆ ಜಿಲ್ಲಾಡಳಿತದ ನೆರವಿನ ಭರವಸೆ

ರಾಯಚೂರು,ಸೆ.20

ಗಣಪತಿ ವಿಸರ್ಜನಾ ಮೆರವಣಿಗೆ ವೇಳೆ ಮೃತಪಟ್ಟ ಇಬ್ಬರು ಮಕ್ಕಳ ಕುಟುಂಬದ ಮನೆಗೆ ರಾಯಚೂರು ಜಿಲ್ಲಾಧಿಕಾರಿ ಹಾಗೂ ಮಹಾನಗರ ಪಾಲಿಕೆ ಆಯುಕ್ತರು ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಕುಟುಂಬದ ಪರಿಸ್ಥಿತಿಯನ್ನು ವಿಚಾರಿಸಿದ ಜಿಲ್ಲಾಧಿಕಾರಿಗಳು, ಮೃತ ಮಕ್ಕಳ ಕುಟುಂಬಕ್ಕೆ ಜಿಲ್ಲಾಡಳಿತದಿಂದ ಅಗತ್ಯ ನೆರವು ನೀಡುವುದಾಗಿ ಭರವಸೆ ನೀಡಿದರು. ಅಲ್ಲದೆ, ಮಕ್ಕಳ ಶಿಕ್ಷಣಕ್ಕೆ ಅಗತ್ಯ ಸಹಾಯ ಹಾಗೂ ಕುಟುಂಬಕ್ಕೆ ಸರ್ಕಾರದಿಂದ ದ'ೂರ'ಯ ುಬಹ'ುದಾದ' ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.



ಭೇಟಿಯ ಸಂದರ್ಭದಲ್ಲಿ ರವಿ ಜಲ್ದಾರ್ ಹಾಗೂ ಎಂ. ಪವನ್ ಕುಮಾರ್ ಉಪಸ್ಥಿತರಿದ್ದರು. ಮಕ್ಕಳ ನಿಧನದ ಬಳಿಕ ಕುಟುಂಬದೊಂದಿಗೆ ನಿಂತು ಅಂತ್ಯಕ್ರಿಯೆ ಸೇರಿದಂತೆ ಅಗತ್ಯ ಕಾರ್ಯಗಳನ್ನು ನೆರವೇರಿಸಿದ ಅವರು, ಕುಟುಂಬಕ್ಕೆ ಜಿಲ್ಲಾಡಳಿತ 'ದಿಂದ ಸಾಧ್ಯವಿರುವ ಎಲ್ಲ ನೆರವು ಹಾಗೂ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಮೃತ ಮಕ್ಕಳ ಕುಟುಂಬದ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಮಕ್ಕಳ ಶಿಕ್ಷಣ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಆಡಳಿತ ಮುಂದಾಗಬೇಕು ಎಂದು ರವಿ ಜಲ್ದಾರ್ ಹಾಗೂ ಎಂ. ಪವನ್ ಕುಮಾರ್ ಮನವಿ ಮಾಡಿದರು.

ಪತ್ರಕರ್ತರ ರಾಜ್ಯ ಸಮ್ಮೇಳನ: ಶಾಸಕ ದದ್ದಲ್ ಜೊತೆ ಪೂರ್ವಭಾವಿ ಸಭೆ



ರಾಯಚೂರು,ಸೆ.20- ರಾಯಚೂರಿನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ನಡೆಯಲಿರುವ ರಾಜ್ಯ ಮಟ್ಟದ 41ನೇ ಪತ್ರಕರ್ತರ ಸಮ್ಮೇಳನದ ಪೂರ್ವ ಸಿದ್ಧತೆಗಳ ಕುರಿತು ಗ್ರಾಮೀಣ ಕ್ಷೇತ್ರದ ಶಾಸಕ ದದ್ದಲ್ ಬಸನಗೌಡ ಅವರನ್ನು ಭೇಟಿ ಮಾಡಿ ಚರ್ಚಿಸಲಾಯಿತು. ಇತ್ತೀಚಿಗೆ ನಗರದ ಅವರ ಕಚೇರಿಯಲ್ಲಿ ಭೇಟಿ ಮಾಡಿ ಮಾತುಕತೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ಶಾಸಕರು, ನನ್ನಿಂದ ಏನೇ ಸಹಕಾರ ಬೇಕಿದ್ದರು ನೀಡುವೆ. ಸಮ್ಮೇಳನ ಯಶಸ್ವಿಯಾದ್ರೆ ಇಡೀ ಜಿಲ್ಲೆಗೆ ಒಳ್ಳೆಯ ಹೆಸರು ಬರುತ್ತದೆ.

ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳ ಜತೆ ಚರ್ಚೆ ಮಾಡುವೆ. ನೀವು ಸಮ್ಮೇಳನದ ಸಿದ್ಧತೆ ಮಾಡಿಕೊಳ್ಳಿ ಎಂದು ತಿಳಿಸಿದರು.

ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ, ಪ್ರಧಾನ ಕಾರ್ಯದರ್ಶಿ ಸಿದ್ಧಯ್ಯ ಸ್ವಾಮಿ, ರಾಜ್ಯ ಸಮಿತಿ ಸದಸ್ಯ ಬಸವರಾಜ್ ನಾಗಡದಿನ್ನಿ, ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ್ ಜಾಗಟಗಲ್, ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ್, ಸಂಘದ ಉಪಾಧ್ಯಕ್ಷ ಮಹಾನಂದ ನಾಯಕ, ಕಾರ್ಯಕಾರಿ ಸಮಿತಿ

3ನೇ ಪುಟ.....

ಡಿಜೆ ಸೌಂಡ್‌ಗೆ ಕಡಿವಾಣ ಹಾಕಿ; 12 ಗಂಟೆಯೊಳಗೆ ಗಣೇಶ ವಿಸರ್ಜನೆ

ಡಿಜೆ ಬಿಟ್ಟು ಸಾಂಸ್ಕೃತಿಕವಾಗಿ ಗಣೇಶೋತ್ಸವ ಆಚರಿಸಿ : ಎ. ಪಾಪಾರೆಡ್ಡಿ

ರಾಯಚೂರು,ಸೆ.20- ಗಣೇಶೋತ್ಸವದ ಹೆಸರಿನಲ್ಲಿ ಅತಿಯಾದ ಡಿಜೆ ಸೌಂಡ್, ತಡ ರಾತ್ರಿ ಮೆರವಣಿಗೆ ಹಾಗೂ ನಿಯಮ ಉಲ್ಲಂಘನೆಗೆ ಅವಕಾಶ ನೀಡದೆ, ಜಿಲ್ಲಾಡಳಿತದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ರಾತ್ರಿ 12 ಗಂಟೆಯೊಳಗೆ ಗಣೇಶ ಮೂರ್ತಿಗಳ ವಿಸರ್ಜನೆ ಪೂರ್ಣಗೊಳಿಸಬೇಕು ಎಂದು ಮಾಜಿ ಶಾಸಕ ಎ. ಪಾಪಾರೆಡ್ಡಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು,



ಗಣೇಶೋತ್ಸವ ಸಂದರ್ಭದಲ್ಲಿ ಇತ್ತೀಚೆಗೆ ನಡೆದ ಕೆಲವು ಘಟನೆಗಳು ಆತಂಕ ಮೂಡಿಸಿವೆ. ಇಂತಹ ಘಟನೆಗಳು ಮರುಕಳಿಸದಂತೆ ಗಣೇಶೋತ್ಸವ ಸಮಿತಿಗಳು ಹಾಗೂ ಸಮಾಜದ ಹಿರಿಯರು ಮುನ್ನೆಚ್ಚರಿಕೆ ವಹಿಸಬೇಕು ಎಂದರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಇಲಾಖೆ ಗಣೇಶ ಮೂರ್ತಿ ಪ್ರತಿಷ್ಠಾಪನೆ, ಮೆರವಣಿಗೆ ಮತ್ತು ವಿಸರ್ಜನೆಗೆ ಸಂಬಂಧಿಸಿದಂತೆ ನೀಡಿರುವ ಸೂಚನೆಗಳನ್ನು ಪ್ರತಿಯೊಂದು ಗಣೇಶೋತ್ಸವ ಸಮಿತಿಯೂ ಪಾಲಿಸಬೇಕು. ಸಮಾಜದ ಹಿರಿಯರು ಸಂಜೆ 6 ಗಂಟೆಯಿಂದಲೇ ಸಮಿತಿಗಳೊಂದಿಗೆ ಸಂಪರ್ಕದಲ್ಲಿದ್ದು, ವಿಸರ್ಜನೆ ಪ್ರಕ್ರಿಯೆ ರಾತ್ರಿ 12 ಗಂಟೆಯೊಳಗೆ ಪೂರ್ಣಗೊಳ್ಳುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಡಿಜೆ ಅಬ್ಬರಕ್ಕಿಂತ ಸಂಸ್ಕೃತಿ ಮುಖ್ಯ: ಡಿಜೆ ಸೌಂಡ್‌ನಿಂದ ಚಿಕ್ಕ ಮಕ್ಕಳು, ವೃದ್ಧರು ಹಾಗೂ ಹೃದಯ ಸಂಬಂಧಿತ ಸಮಸ್ಯೆ ಹೊಂದಿರುವವರಿಗೆ ತೊಂದರೆ ಉಂಟಾಗುವ ಸಾಧ್ಯತೆ ಇದೆ. ಹೀಗಾಗಿ ಗಣೇಶೋತ್ಸವವನ್ನು ಅತಿಯಾದ ಶಬ್ದ ಮತ್ತು ಡಿಜೆ ಅಬ್ಬರಕ್ಕೆ ಸೀಮಿತಗೊಳಿಸದೆ, ಭಕ್ತಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಆಚರಿಸಬೇಕು ಎಂದು ಪಾಪಾರೆಡ್ಡಿ ಹೇಳಿದರು.

ಡಿಜೆ ಬದಲಿಗೆ ಡೊಳ್ಳು, ಹಲಗೆ, ಭಜನೆ, ಕೋಲಾಟ ಸೇರಿದಂತೆ ಸಾಂಸ್ಕೃತಿಕ

3ನೇ ಪುಟ.....

ಕೆವೈಸಿಗಾಗಿ ರಾತ್ರಿ ಸರತಿ ಸಾಲು: ಜನರ ಪರದಾಟ



ಸಿರವಾರ,ಸೆ.20-

ಪಡಿತರ ಚೀಟಿ ಇ-ಕೆವೈಸಿ ಮಾಡಿಸಲು ಜನರು ಇಡೀ ರಾತ್ರಿ ನ್ಯಾಯಬೆಲೆ ಅಂಗಡಿ ಮುಂದೆ ಸರತಿ ಸಾಲಿನಲ್ಲಿ ನಿಂತು ಕಾಯುತ್ತಿರುವ ಪರಿಸ್ಥಿತಿ ನಿರ್ಮಾಣವಾಗಿದೆ.

ತಾಲ್ಲೂಕಿನ ಬಿ. ಗಣೇಕಲ್ ಗ್ರಾಮದ ನ್ಯಾಯಬೆಲೆ ಅಂಗಡಿಯಲ್ಲಿ ಇ-ಕೆವೈಸಿ ಮಾಡಿಸಿಕೊಳ್ಳಲು ಹತ್ತಾರು ಮಂದಿ ರಾತ್ರಿ ವೇಳೆ ಅಂಗಡಿ ಮುಂದೆ ಕುಳಿತು ಕಾಯುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಸರ್ವರ್ ಸಮಸ್ಯೆ ಹಾಗೂ ತಾಂತ್ರಿಕ ದೋಷಗಳಿಂದಾಗಿ ಇ-ಕೆವೈಸಿ ಪ್ರಕ್ರಿಯೆ ವಿಳಂಬವಾಗುತ್ತಿದ್ದು, ಅಂತಿಮ ಗಡುವಿನ ಆತಂಕದಿಂದ ಜನರು ರಾತ್ರಿಯಲ್ಲಿಯೇ ಸರತಿ ಸಾಲಿನಲ್ಲಿ ನಿಲ್ಲುವಂತಾಗಿದೆ.

ರೈತ ಸಂಘದ ಮುಖಂಡ ಹಾಜಿ ಮಸ್ತಾನ್ ಮಾತನಾಡಿ, ಮಧ್ಯರಾತ್ರಿ ಸಮೀಪಿಸುತ್ತಿದ್ದರೂ ಸಮಸ್ಯೆ ಬಗೆಹರಿಯುತ್ತಿಲ್ಲ. ತಾಂತ್ರಿಕ ಸಮಸ್ಯೆಯಿಂದಾಗಿ ಇ-ಕೆವೈಸಿ ಮಾಡಿಸಿಕೊಳ್ಳಲು ಜನರು ಪರದಾಡುವಂತಾಗಿದೆ. ಸುತ್ತಮುತ್ತಲಿನ ಸಣ್ಣಪುಟ್ಟ ಗ್ರಾಮಗಳಿಂದ ಬರುವ ಜನರು ಇ-ಕೆವೈಸಿಗಾಗಿ ಎರಡು-ಮೂರು ದಿನಗಳ ಕಾಲ ಕೆಲಸ ಬಿಟ್ಟು ಸಮಯ ಮೀಸಲಿಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇ-ಕೆವೈಸಿ ಮಾಡಿಸಿಕೊಳ್ಳಲು ಜನರು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಅವರ ಗೋಳು ಕಾಂಗ್ರೆಸ್ ಸರ್ಕಾರಕ್ಕೆ ಅರ್ಥವಾಗುತ್ತಿಲ್ಲ. ಗ್ರಾಮೀಣ ಭಾಗದ ರೈತರು, ಕೂಲಿ ಕಾರ್ಮಿಕರು, ಗರ್ಭಿಣಿಯರು ಹಾಗೂ ವೃದ್ಧರು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ತಾಂತ್ರಿಕ ಸಮಸ್ಯೆಯನ್ನು ಬಗೆಹರಿಸಿ, ಜನರಿಗೆ ಆಗುತ್ತಿರುವ ತೊಂದರೆ ನಿವಾರಿಸಬೇಕು ಎಂದು ಅವರು ಆಗ್ರಹಿಸಿದರು.

ಆಳಂದ ತಾಲೂಕಿನ ಮುನ್ನೊಳಿಯಲ್ಲಿ ಪ್ರಜಾಸೇವೆ ಅಭಿಯಾನಕ್ಕೆ ಚಾಲನೆ



ಕಲಬುರಗಿ,ಸೆ.20-

ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಆಡಳಿತವೇ ಜನರ ಬಳಿಗೆ ತೆರಳಿ ಕುಂದುಕೊರತೆಗಳನ್ನು ಆಲಿಸಿ ಪರಿಹಾರ ಒದಗಿಸುವುದು ಪ್ರಜಾಸೇವೆ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ಆಳಂದ ತಾಲೂಕಿನ ಮುನ್ನೊಳಿ ಗ್ರಾಮ ಪಂಚಾಯಿತಿ ಕಚೇರಿ ಆವರಣದಲ್ಲಿ ಹೋಬಳಿ ಮಟ್ಟದ ಪ್ರಜಾಸೇವೆ ಅಭಿಯಾನಕ್ಕೆ ಸಸಿಗೆ ನೀರೆರೆಯುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಜನಸ್ನೇಹಿ, ಪಾರದರ್ಶಕ ಮತ್ತು ತ್ವರಿತ ಆಡಳಿತ ನೀಡುವ ಆಶಯದಿಂದ ಈ ಅಭಿಯಾನ ರೂಪಿಸಲಾಗಿದೆ. ಜನಸ್ಪಂದನ ಹಾಗೂ ಜಿಲ್ಲಾಧಿಕಾರಿಗಳ ನಡೆ ಹಳ್ಳಿಯ ಕಡೆ ಕಾರ್ಯಕ್ರಮಗಳ ಮುಂದುವರಿದ ಭಾಗವಾಗಿ ಪ್ರಜಾಸೇವೆ ಕಾರ್ಯನಿರ್ವಹಿಸಲಿದ್ದು, ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ಸಾಧ್ಯವಾದಷ್ಟು ತಕ್ಷಣ ಪರಿಹಾರ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಅಭಿಯಾನದಲ್ಲಿ ತಂತ್ರಜ್ಞಾನಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಸಾರ್ವಜನಿಕರಿಂದ ಸ್ವೀಕರಿಸುವ ಪ್ರತಿಯೊಂದು ಅರ್ಜಿಗೂ ಯುನಿಕ್ ಐಡೆಂಟಿಟಿ ಕೋಡ್ ನೀಡಲಾಗುತ್ತದೆ. ಅರ್ಜಿಗಳನ್ನು ಐಪಿಜಿಆರ್‌ಎಸ್ () ತಂತ್ರಾಂಶದಲ್ಲಿ ದಾಖಲಿಸಲಾಗುತ್ತಿದ್ದು, ಅವುಗಳ ವಿಲೇವಾರಿಯನ್ನು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ, ಮುಖ್ಯಮಂತ್ರಿಗಳ ಕಚೇರಿಯಿಂದಲೂ ಮೇಲ್ವಿಚಾರಣೆ ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ವಿವರಿಸಿದರು.

ಸಭೆಗಳಿಗೆ ಮಾತ್ರ ಸೀಮಿತವಾಗದೆ ಅಧಿಕಾರಿಗಳು ಶಾಲೆಗಳು, ಆಸ್ಪತ್ರೆಗಳು, ಕೃಷಿ ಜಮೀನುಗಳು ಹಾಗೂ ಕುಡಿಯುವ ನೀರಿನ ಯೋಜನೆಗಳಿಗೆ ನೇರವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ರೈತರ ಮೇವಿನ ಕೊರತೆ, ಜಮೀನು ಸರ್ವೇ, ಆರೋಗ್ಯ ಸೇವೆಗಳು ಸೇರಿದಂತೆ ಸಾರ್ವಜನಿಕರಿಂದ ಸಲ್ಲಿಕೆಯಾಗುವ ದೂರುಗಳಿಗೆ ಕಾಲಮಿತಿಯಲ್ಲಿ ಸ್ಪಂದಿಸಬೇಕು. ಅಧಿಕಾರಿಗಳು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ನಡೆದುಕೊಂಡು ಸಮಸ್ಯೆಗಳಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ನಿರ್ದೇಶನ ನೀಡಿದರು.

ಪ್ರಜಾಸೇವೆ ಅಭಿಯಾನದ ಅಂಗವಾಗಿ ವಿವಿಧ ಇಲಾಖೆಗಳ 11 ಸ್ಟಾಲ್‌ಗಳನ್ನು ಸ್ಥಾಪಿಸಿ ಸಾರ್ವಜನಿಕರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಯಿತು. ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಕಂದಾಯ, ಗ್ರಾಮೀಣಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಲೀಡ್ ಬ್ಯಾಂಕ್, ಎಸ್‌ಐಆರ್ ವಿಬಿ-ಜಿ-ರಾಮ್‌ಜಿ, ಸಮಾಜ ಕಲ್ಯಾಣ, ಅಲ್ಪಸಂಖ್ಯಾತ, ಹಿಂದುಳಿದ ವರ್ಗಗಳ ಕಲ್ಯಾಣ, ಆಹಾರ, ಜೆಸ್ಕಾಂ, ಯುವನಿಧಿ ಹಾಗೂ ಸಹಕಾರ ಇಲಾಖೆಗಳ ಯೋಜನೆಗಳ ಕುರಿತು ಮಾಹಿತಿ ನೀಡಲಾಯಿತು.

ಜಿಲ್ಲಾ ಪಂಚಾಯಿತಿ ಸಿಇಒ ರಾಹುಲ್ ಎಸ್. ಸಂಕನೂರ ಮಾತನಾಡಿ, ಸಾರ್ವಜನಿಕರು ತಾಲೂಕು ಅಥವಾ ಜಿಲ್ಲಾ ಕೇಂದ್ರಗಳಿಗೆ ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದಲೇ ಜಿಲ್ಲಾ ಮಟ್ಟದ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡುತ್ತಿದ್ದಾರೆ. ಕಾರ್ಯಕ್ರಮವನ್ನು ಕೇವಲ ಔಪಚಾರಿಕತೆಗೆ ಸೀಮಿತಗೊಳಿಸದೆ, ಸಾರ್ವಜನಿಕರಿಗೆ ನೈಜ ಪರಿಹಾರ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗ್ರಾಮಸ್ಥರಿಂದ ವಿವಿಧ ಕುಂದುಕೊರತೆಗಳ ಕುರಿತು ಮನವಿಗಳನ್ನು ಸ್ವೀಕರಿಸಲಾಯಿತು. ಒಟ್ಟು 52 ಅರ್ಜಿಗಳು ಸಲ್ಲಿಕೆಯಾಗಿದ್ದು, ತಕ್ಷಣ ಪರಿಹರಿಸಬಹುದಾದ ಸಮಸ್ಯೆಗಳಿಗೆ ಸ್ಥಳದಲ್ಲೇ ಕ್ರಮ ಕೈಗೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಆಳಂದ ತಾಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶಿವಪುತ್ರಪ್ಪ ಪಾಟೀಲ್, ಎಸ್‌ಪಿ ಅಡ್ಡೂರು ಶ್ರೀನಿವಾಸಲು, ಸಹಾಯಕ ಆಯುಕ್ತೆ ರೀತಿಕಾ ವರ್ಮಾ, ಸಾಮಾಜಿಕ ಉಪ ನಿರ್ದೇಶಕ ಸಾಗರ ತಾವಡೆ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಶಂಕ್ರಮ್ಮ ಢವಳಗಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಸಂತೋಷ ಇನಾಂದಾರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಡಿಎಚ್‌ಒ ಶರಣಬಸಪ್ಪ ಕ್ಯಾತನಾಳ, ಆಳಂದ ತಹಶೀಲ್ದಾರ್ ಅಣ್ಣಾರಾವ ಪಾಟೀಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ನೈಸ್ ಭೂಮಿ ರೈತರಿಗೆ ವಾಪಸ್ ನೀಡುವಂತೆ ಆಗ್ರಹಿಸಿ ಡಿವೈಎಫ್‌ಐನಿಂದ ಪ್ರತಿಭಟನೆ



ಬೀದರ್ ,ಸೆ.20-

ನೈಸ್ ಯೋಜನೆಗೆ ಸಂಬಂಧಿಸಿದಂತೆ ಹೈಕೋರ್ಟ್ ನೀಡಿರುವ ತೀರ್ಪು ಜಾರಿಗೆ ತರಬೇಕು ಹಾಗೂ ಪ್ರತಿಭಟನೆ ನಡೆಸುತ್ತಿದ್ದ ರೈತ-ಕಾರ್ಮಿಕ ಸಂಘಗಳ ಮುಖಂಡರ ಬಂಧನವನ್ನು ಖಂಡಿಸಿ ಡಿವೈಎಫ್‌ಐ ವತಿಯಿಂದ ಶನಿವಾರ ಹುಮನಾಬಾದ್‌ನಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಮಾತನಾಡಿ, ಹೈಕೋರ್ಟ್ ನೈಸ್ ಭೂಮಿಯನ್ನು ರೈತರಿಗೆ ವಾಪಸ್ ನೀಡಬೇಕು ಮತ್ತು ಟೋಲ್ ಸಂಗ್ರಹವನ್ನು ನಿಲ್ಲಿಸುವಂತೆ ತೀರ್ಪು ನೀಡಿದ್ದರೂ, ರಾಜ್ಯ ಸರ್ಕಾರ ಅದನ್ನು ಜಾರಿಗೆ ತಂದಿಲ್ಲ ಎಂದು ಆರೋಪಿಸಿದರು. ಭೂಮಿ ಕಳೆದುಕೊಂಡ ರೈತರ ಪರವಾಗಿ ಹೋರಾಟ ನಡೆಸುತ್ತಿರುವ ರೈತ ಮತ್ತು ಕಾರ್ಮಿಕ ಸಂಘಟನೆಗಳ ಮುಖಂಡರನ್ನು ಬಂಧಿಸುವ ಮೂಲಕ ಸರ್ಕಾರ ಸಾರ್ವಜನಿಕರ ಧ್ವನಿಯನ್ನು ದಮನಿಸಲು ಮುಂದಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯಾಧ್ಯಕ್ಷ ಯು.ಬಸವರಾಜ್ ಸೇರಿದಂತೆ ಹಲವು ರೈತ ಮತ್ತು ಕಾರ್ಮಿಕ ಮುಖಂಡರನ್ನು ಬಂಧಿಸಲಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಇನ್ನೂ ಕೆಲವರನ್ನು ಬಂಧಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ದೂರಿದರು.

ಹೈಕೋರ್ಟ್ ಆದೇಶವನ್ನು ಉಲ್ಲೇಖಿಸಿ ಫ್ರೀಡಂ ಪಾರ್ಕ್ ಹೊರತುಪಡಿಸಿ ಬೇರೆಡೆ ಪ್ರತಿಭಟನೆಗೆ ಅವಕಾಶ ನೀಡದ ಸರ್ಕಾರ, ನೈಸ್ ಪ್ರಕರಣದಲ್ಲಿ ನೀಡಿರುವ ತೀರ್ಪನ್ನು ಜಾರಿಗೆ ತರಲು ವಿಳಂಬ ಮಾಡುತ್ತಿದೆ ಎಂದು ಅವರು ಆರೋಪಿಸಿದರು.

ಬಂಧಿತರನ್ನು ಕೂಡಲೇ ಬಿಡುಗಡೆ ಮಾಡಬೇಕು, ಸಾರ್ವಜನಿಕರಿಗೆ ಶಾಂತಿಯುತ ಪ್ರತಿಭಟನೆ ನಡೆಸಲು ಅವಕಾಶ ನೀಡಬೇಕು ಹಾಗೂ ಹೈಕೋರ್ಟ್ ತೀರ್ಪಿನ ಅನ್ವಯ ನೈಸ್ ಭೂಮಿಯನ್ನು ರೈತರಿಗೆ ವಾಪಸ್ ನೀಡುವುದರ ಜೊತೆಗೆ ಟೋಲ್ ಸಂಗ್ರಹವನ್ನು ನಿಲ್ಲಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಡಿವೈಎಫ್‌ಐ ಜಿಲ್ಲಾ ಸಂಚಾಲಕ ಶಶಿಕಾಂತ್ ಡಾಂಗೆ, ಕಟ್ಟಡ ಕಾರ್ಮಿಕ ಜಿಲ್ಲಾ ಸಂಚಾಲಕ ಗೌಸೋದ್ದೀನ್, ರೇಷ್ಮಾ ಹಂಸರಾಜ್, ಬಸವರಾಜ್ ಮಾಳಗೆ, ಕಟ್ಟಡ ಕಾರ್ಮಿಕರ ಜಿಲ್ಲಾ ಸಂಚಾಲಕ ನಬಿ ಸೇರಿದಂತೆ ಇತರರು ಇದ್ದರು.



ಹುಲಸೂರ್ ಪ್ರಜಾಸೇವಾ ಆಂದೋಲನದಲ್ಲಿ 266 ಅರ್ಜಿಗಳ ಸ್ವೀಕಾರ

ಹುಲಸೂರ್,ಸೆ.20-

ಪಟ್ಟಣದ ಗುರುಬಸವೇಶ್ವರ ಸಂಸ್ಥಾನ ಮಠದಲ್ಲಿ ಶನಿವಾರ ನಡೆದ ತಾಲೂಕು ಮಟ್ಟದ ಪ್ರಜಾಸೇವಾ ಆಂದೋಲನದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಒಟ್ಟು 266 ಅರ್ಜಿಗಳು ಸ್ವೀಕೃತವಾಗಿವೆ.

ಕಾರ್ಯಕ್ರಮದಲ್ಲಿ ಮಾತನಾಡಿದ ತಹಶೀಲ್ದಾರ್ ಶಿವಾನಂದ್ ಮೇತ್ರೆ, ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಅಗ್ನಿಶಾಮಕ ಇಲಾಖೆ ಅಧಿಕಾರಿ ಮಚೀಂದ್ರ ಶಿಂದೆ ಮಾತನಾಡಿ, ಬರಗಾಲದ ಸಂದರ್ಭದಲ್ಲಿ ಬೆಂಕಿ ಅವಘಡಗಳ ಸಂಭವ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು. ತುರ್ತು ಸಂದರ್ಭಗಳಲ್ಲಿ 101 ಅಥವಾ 112 ಸಂಖ್ಯೆಗೆ ಕರೆ ಮಾಡುವಂತೆ ತಿಳಿಸಿದರು.

ಪ್ರಜಾಸೇವಾ ಆಂದೋಲನದಲ್ಲಿ ಮಾಶಾಸನ, ಸಂಧ್ಯಾ ಸುರಕ್ಷಾ ಯೋಜನೆ, ಪಡಿತರ ಚೀಟಿ, ಗೃಹಜ್ಯೋತಿ ಹಾಗೂ ಗೃಹಲಕ್ಷ್ಮಿ ಯೋಜನೆಗಳಿಗೆ ಸಂಬಂಧಿಸಿದ ಅರ್ಜಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸಲ್ಲಿಕೆಯಾಗಿವೆ. ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಆರಂಭ, ಮೆಟ್ರಿಕ್ ನಂತರದ ವಸತಿ ನಿಲಯ ಸ್ಥಾಪನೆ, ಸವಿತಾ ಸಮಾಜ ಭವನ ನಿರ್ಮಾಣ ಹಾಗೂ ಗಣೇಶನಗರದ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಸಾರ್ವಜನಿಕರು ಮನವಿ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳು ಭಾಗವಹಿಸಬೇಕಿದ್ದರೂ ಕೆಲ ಅಧಿಕಾರಿಗಳು ಗೈರಾಗಿದ್ದರು. ಇದರಿಂದ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದನೆ ದೊರೆಯುತ್ತಿಲ್ಲ. ಗೈರಾದ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಬೇಕು ಎಂದು ಸಾಮಾಜಿಕ ಕಾರ್ಯಕರ್ತ ನಾಗರಾಜ್ ಅದೆಪ್ಪ ಆಗ್ರಹಿಸಿದರು.

ಪ್ರಜಾಸೇವಾ ಆಂದೋಲನದಲ್ಲಿ ಒಟ್ಟು 266 ಅರ್ಜಿಗಳು ಸ್ವೀಕೃತವಾಗಿದ್ದರೂ, ಕಾರ್ಯಕ್ರಮದ ವೇಳೆ ಒಂದೂ ಅರ್ಜಿ ವಿಲೇವಾರಿಯಾಗಿಲ್ಲ ಎಂಬುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಇಒ ಮಹಾದೇವ್ ಜಮ್ಮು, ಉಪ ತಹಶೀಲ್ದಾರ್ ಸುನಿಲಕುಮಾರ್ ಸಜ್ಜನಶೆಟ್ಟಿ, ಹಾಗೂ ಸಂತೋಷ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕುವೆಂಪು ಭಾಷಾ ಭಾರತಿ ಪ್ರಶಸ್ತಿ ಕಲ್ಯಾಣ ಕರ್ನಾಟಕ ಸಾಹಿತ್ಯ ಕ್ಷೇತ್ರಕ್ಕೆ ಸಂದ ಗೌರವ: ಬಸಣ್ಣ ಸಿಂಘೆ



ಕಲಬುರಗಿ,ಸೆ.20-

ಬಹುಭಾಷಾ ಜ್ಞಾನ, ಸಾಹಿತ್ಯಿಕ ಪ್ರತಿಭೆ ಹಾಗೂ ಅನುವಾದ ಕ್ಷೇತ್ರದಲ್ಲಿನ ನಿರಂತರ ಸಾಧನೆಯ ಮೂಲಕ ಡಾ. ಸೂರ್ಯಕಾಂತ ಎಸ್. ಸುಜ್ಯಾತ್ ಅವರು ಕಲ್ಯಾಣ ಕರ್ನಾಟಕದ ಸಾಹಿತ್ಯ ಕ್ಷೇತ್ರಕ್ಕೆ ಹೆಮ್ಮೆ ತಂದಿದ್ದಾರೆ. ಅವರಿಗೆ ಲಭಿಸಿರುವ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ವಾರ್ಷಿಕ ಪ್ರಶಸ್ತಿ ಇಡೀ ಕಲ್ಯಾಣ ಕರ್ನಾಟಕದ ಸಾಹಿತ್ಯ ಕ್ಷೇತ್ರಕ್ಕೆ ಸಂದ ಗೌರವವಾಗಿದೆ ಎಂದು ದಲಿತ ಚಿಂತಕ ಹಾಗೂ ಹೋರಾಟಗಾರ ಬಸಣ್ಣ ಸಿಂಘೆ ಹೇಳಿದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯಲ್ಲಿ ಡಾ. ಸೂರ್ಯಕಾಂತ ಎಸ್. ಸುಜ್ಯಾತ್ ಅವರಿಗೆ ಅಭಿನಂದನಾ ಸಮಾರಂಭ ಹಾಗೂ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸುಜ್ಯಾತ್ ಅವರು ಸಾಹಿತ್ಯ ಕೃಷಿಯ ಜೊತೆಗೆ ಅನುವಾದ ಜ್ಞಾನ, ಬಹುಭಾಷಾ ವಿದ್ವತ್ತು ಹಾಗೂ ಬರವಣಿಗೆಯ ಕೌಶಲ್ಯವನ್ನು ಬೆಳೆಸಿಕೊಂಡಿದ್ದಾರೆ. ಕನ್ನಡ, ಹಿಂದಿ, ಮರಾಠಿ ಮತ್ತು ಉರ್ದು ಭಾಷೆಗಳ ಸಾಹಿತ್ಯವನ್ನು ಆಳವಾಗಿ ಅಧ್ಯಯನ ಮಾಡಿ ಅನುವಾದ ಸಾಹಿತ್ಯ ಕ್ಷೇತ್ರದಲ್ಲಿ ಗಮನಾರ್ಹ ಕೊಡುಗೆ ನೀಡಿದ್ದಾರೆ. ಅವರ ಸಾಹಿತ್ಯ ಸೇವೆಗೆ ಮುಂದಿನ ದಿನಗಳಲ್ಲಿ ಇನ್ನಷ್ಟು ಗೌರವಗಳು ದೊರೆಯಲಿ ಎಂದು ಶುಭ ಹಾರೈಸಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ವಿಕ್ರಮ ವಿಸಾಜಿ ಮಾತನಾಡಿ, ಸರಳ ವ್ಯಕ್ತಿತ್ವ, ಸ್ವಾಭಿಮಾನ, ಪರಿಶ್ರಮ ಹಾಗೂ ಪ್ರಾಮಾಣಿಕತೆಯ ಮೂಲಕ ಡಾ. ಸುಜ್ಯಾತ್ ಅವರು ಮಹತ್ವದ ಸಾಧನೆ ಮಾಡಿದ್ದಾರೆ ಎಂದರು.

ಬಡತನದ ಕುಟುಂಬದಲ್ಲಿ ಬೆಳೆದ ಅವರು ಓದು, ಬರವಣಿಗೆ ಮತ್ತು ಅನುವಾದದ ಆಸಕ್ತಿಯಿಂದ ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ನಿರ್ಲಕ್ಷ್ಯಕ್ಕೆ ಒಳಗಾದ ಹಲವು ಕೃತಿಗಳನ್ನು ಕನ್ನಡಕ್ಕೆ ಅನುವಾದಿಸಿ ಓದುಗರಿಗೆ ಪರಿಚಯಿಸಿದ್ದಾರೆ. ಭಾಷಾ ಮಡಿವಂತಿಕೆಯ ಈ ಕಾಲದಲ್ಲಿಯೂ ವಿವಿಧ ಭಾಷೆಗಳ ವೈಚಾರಿಕ ಸಾಹಿತ್ಯವನ್ನು ಕನ್ನಡಕ್ಕೆ ತರುವ ಕೆಲಸ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮರಾಠಿ ಭಾಷೆಯ ಗಾಡಗೆ ಮಹಾರಾಜ, ತೃತೀಯ ರತ್ನ, ಭೀಮಾ ಕೋರೆಗಾಂವ ಹಾಗೂ ಹಿಂದಿ ಭಾಷೆಯ ದೀಕ್ಷೆ ಸೇರಿದಂತೆ ಹಲವು ಕೃತಿಗಳನ್ನು ಕನ್ನಡಕ್ಕೆ ಅನುವಾದಿಸಿರುವ ಅವರು, ಅನುವಾದದ ರಚನಾ ವಿಧಾನ, ಸವಾಲುಗಳು ಮತ್ತು ಸಾಧ್ಯತೆಗಳನ್ನು ಸಮರ್ಥವಾಗಿ ಅರ್ಥೈಸಿಕೊಂಡಿದ್ದಾರೆ. ಗ್ರಾಮೀಣ ಹಿನ್ನೆಲೆಯಿಂದ ಬಂದ ಪ್ರತಿಭೆಯಾಗಿ ಶಿಕ್ಷಣದಿಂದ ದೊರೆತ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಮಾದರಿ ಸಾಧನೆ ಮಾಡಿದ್ದಾರೆ ಎಂದು ಹೇಳಿದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಕಲಾ ನಿಕಾಯದ ಡೀನ್ ಹಾಗೂ ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ. ಎಚ್.ಟಿ. ಪೋತೆ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಣದ ಅವಕಾಶಗಳು ವಿಸ್ತಾರಗೊಂಡ ನಂತರ ಜ್ಯೋತಿಬಾ ಫುಲೆ, ಡಾ. ಬಿ.ಆರ್. ಅಂಬೇಡ್ಕರ್, ಗಾಡಗೆ ಬಾಬಾ ಮುಂತಾದವರು ಜ್ಞಾನಕ್ಕೆ ಮಹತ್ವ ನೀಡುವ ಮೂಲಕ ಸಮಾಜದಲ್ಲಿ ಬದಲಾವಣೆಗೆ ಕಾರಣರಾದರು ಎಂದು ಹೇಳಿದರು.

ಸಂಘರ್ಷ, ಅಪಮಾನ ಮತ್ತು ಅವಮಾನಗಳನ್ನು ಮೆಟ್ಟಿಲುಗಳನ್ನಾಗಿ ಮಾಡಿಕೊಂಡು ಸಾಧನೆ ಮಾಡಿದವರ ಇತಿಹಾಸ ನಮ್ಮ ಮುಂದಿದೆ. ಯುವಜನರು ಶಿಕ್ಷಣದ ಅವಕಾಶಗಳ ಮಹತ್ವವನ್ನು ಅರಿತುಕೊಂಡು ನಿರಂತರ ಅಧ್ಯಯನ, ಬರವಣಿಗೆ ಮತ್ತು ಪರಿಶ್ರಮದ ಮೂಲಕ ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದು ಕರೆ ನೀಡಿದರು.

ಸಾಹಿತಿ ಡಾ. ಶ್ರೀಶೈಲ ನಾಗರಾಳ, ಅನುವಾದಕ ಡಾ. ಸೂರ್ಯಕಾಂತ ಎಸ್. ಸುಜ್ಯಾತ್ ಹಾಗೂ ಸಿದ್ದಲಿಂಗೇಶ್ವರ ಪ್ರಕಾಶನದ ಮಾಲೀಕ ಬಸವರಾಜ ಕೊನೆಕ್ ಮಾತನಾಡಿದರು. ಶ್ರೀಮತಿ ಶೀಲಾವತಿ ಸುಜ್ಯಾತ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಡಾ. ಸೂರ್ಯಕಾಂತ ಪಾಟೀಲ್, ಡಾ. ಎಚ್.ಎಸ್. ಹೊಸಮನಿ, ಸಿ.ಎಸ್. ಮಾಲಿ ಪಾಟೀಲ್, ಲಕ್ಷ್ಮೀಕಾಂತ ಹುಬ್ಬಳ್ಳಿ, ಡಾ. ಪ್ರದೀಪ್ ಕಡೂನ ಸೇರಿದಂತೆ ಹಲವರು ಭಾಗವಹಿಸಿದ್ದರು. ಕನ್ನಡ ಸಂಶೋಧನಾ ಸಂಘ ಹಾಗೂ ಕನ್ನಡ ಸಾಹಿತ್ಯ ಸಂಘದ ಪದಾಧಿಕಾರಿಗಳು, ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಂಗೀತ ವಿಭಾಗದ ಡಾ. ಲಕ್ಷ್ಮೀಶಂಕರ್ ಜೋಷಿ ಪ್ರಾರ್ಥಿಸಿದರು. ಡಾ. ಜಯ ದಾನಮ್ಮ ವಚನ ಗಾಯನ ಪ್ರಸ್ತುತಪಡಿಸಿದರು. ಡಾ. ಕಿರಣ್ ಗಣಪತಿ ಕಾರ್ಯಕ್ರಮ ನಿರ್ವಹಿಸಿದರು. ಡಾ. ಸಂತೋಷ ಕಂಬಾರ ವಂದಿಸಿದರು.

ಎಸ್‌ಟಿ ಪ್ರಮಾಣಪತ್ರ ಪ್ರಕ್ರಿಯೆಗೆ ಅಡ್ಡಿಪಡಿಸುವವರ ವಿರುದ್ಧ ಕ್ರಮಕ್ಕೆ ತಳವಾರ ಮಹಾಸಭಾ ಆಗ್ರಹ



ಜೇವರ್ಗಿ ,ಸೆ.20-

ತಳವಾರ ಸಮುದಾಯದ ಅರ್ಹರಿಗೆ ಪರಿಶಿಷ್ಟ ಪಂಗಡ (ಎಸ್‌ಟಿ) ಜಾತಿ ಪ್ರಮಾಣಪತ್ರ ನೀಡುವ ಸರ್ಕಾರಿ ಪ್ರಕ್ರಿಯೆಗೆ ಅಡ್ಡಿಪಡಿಸುವವರು ಹಾಗೂ ಸರ್ಕಾರಿ ಅಧಿಕಾರಿಗಳಿಗೆ ಬೆದರಿಕೆ ಹಾಕುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ತಳವಾರ ಮಹಾಸಭಾದ ಜೇವರ್ಗಿ ತಾಲೂಕು ಘಟಕ ಒತ್ತಾಯಿಸಿದೆ.

ಈ ಕುರಿತು ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿರುವ ಮಹಾಸಭಾದ ಮುಖಂಡರು, ಸರ್ಕಾರದ ಆದೇಶ ಅಥವಾ ಅಧಿಸೂಚನೆಗೆ ಯಾರಿಗಾದರೂ ಆಕ್ಷೇಪಣೆಗಳಿದ್ದರೆ ಅವರು ಕಾನೂನುಬದ್ಧ ಹಾಗೂ ಸಾಂವಿಧಾನಿಕ ಮಾರ್ಗದಲ್ಲಿ ತಮ್ಮ ಆಕ್ಷೇಪಣೆ ಸಲ್ಲಿಸಬೇಕು. ಆದರೆ ಅಧಿಕಾರಿಗಳಿಗೆ ಬೆದರಿಕೆ ಹಾಕುವುದು, ಕರ್ತವ್ಯ ನಿರ್ವಹಣೆಗೆ ಅಡ್ಡಿಪಡಿಸುವುದು ಅಥವಾ ತಳವಾರ ಸಮುದಾಯದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.

ಅಧಿಕಾರಿಗಳಿಗೆ ಜೀವ ಬೆದರಿಕೆ ಹಾಕಿ ಒತ್ತಡ ಹೇರುವ ಮೂಲಕ ಕರ್ತವ್ಯಕ್ಕೆ ಅಡ್ಡಿಪಡಿಸಲಾಗುತ್ತಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಶ್ರವಣಕುಮಾರ್ ಡಿ. ನಾಯಕ (ಇಟೇರಿ) ವಿರುದ್ಧ ತನಿಖೆ ನಡೆಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ತಳವಾರ ಸಮುದಾಯದವರನ್ನು ''ನಕಲಿ ತಳವಾರರು'' ಎಂದು ಅವಹೇಳನ ಮಾಡುವ ಹೇಳಿಕೆಗಳ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು. ಜೊತೆಗೆ ಜೇವರ್ಗಿ ಗ್ರೇಡ್-2 ತಹಶೀಲ್ದಾರ್ ಅವರಿಗೆ ಜೀವ ಬೆದರಿಕೆ ಇರುವ ಹಿನ್ನೆಲೆಯಲ್ಲಿ ಅಗತ್ಯ ಭದ್ರತೆ ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ನೈಜ ತಳವಾರ ಸಮುದಾಯದ ಅರ್ಹರಿಗೆ ಸ್ಥಳೀಯ ಪಂಚನಾಮೆ ವರದಿ ಹಾಗೂ ಶಾಲಾ ದಾಖಲಾತಿಗಳನ್ನು ಪರಿಗಣಿಸಿ ನಿಗದಿತ ಕಾಲಮಿತಿಯೊಳಗೆ ಎಸ್‌ಟಿ ಜಾತಿ ಪ್ರಮಾಣಪತ್ರ ನೀಡುವ ಪ್ರಕ್ರಿಯೆಯನ್ನು ಸರಳಗೊಳಿಸಬೇಕು. ಅರ್ಹರಿಗೆ ಪ್ರಮಾಣಪತ್ರ ನೀಡುವ ಸರ್ಕಾರಿ ಪ್ರಕ್ರಿಯೆಗೆ ಅನಧಿಕೃತ ವ್ಯಕ್ತಿಗಳಿಂದ ಯಾವುದೇ ರೀತಿಯ ಅಡ್ಡಿಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮಹಾಸಭಾ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಮಹಾಸಭಾ ತಾಲೂಕು ಅಧ್ಯಕ್ಷ ಗಿರೀಶ್ ತುಂಬಗಿ, ಮೈಲಾರಿ ಗುಡೂರ, ಭೀಮರಾಯ ಜನಿವಾರ, ರಾಜೇಂದ್ರ ರಾಜವಾಳ, ಭಾಗೇಶ್ ಹೊತಿನಮ್ಮಡು, ಬಸು ತಳವಾರ, ಮರೆಪ್ಪ ತಳವಾರ, ರೇವಣಸಿದ್ದ ಕಮಾನಮಣಿ, ರಾಜು ತಳವಾರ ಸೇರಿದಂತೆ ತಳವಾರ ಸಮುದಾಯದ ಮುಖಂಡರು, ಯುವಕರು ಹಾಗೂ ಹಿರಿಯರು ಉಪಸ್ಥಿತರಿದ್ದರು.

ಬರ ಪೀಡಿತ ತಾಲೂಕು ಘೋಷಣೆಗೆ ಆಗ್ರಹಿಸಿ ಔರಾದ್‌ನಲ್ಲಿ ಬಿಜೆಪಿಯಿಂದ ಬೃಹತ್ ಪ್ರತಿಭಟನೆ



ಔರಾದ್, ಸೆ.20-

ಔರಾದ್ ತಾಲೂಕನ್ನು ಬರ ಪೀಡಿತ ಪ್ರದೇಶವೆಂದು ಘೋಷಿಸುವಂತೆ ಆಗ್ರಹಿಸಿ ಶಾಸಕ ಪ್ರಭು ಚವ್ಹಾಣ್ ಅವರ ನೇತೃತ್ವದಲ್ಲಿ ಶನಿವಾರ ಪಟ್ಟಣದಲ್ಲಿ ರೈತರು ಮತ್ತು ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.

ಬಸವೇಶ್ವರ ವೃತ್ತದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಬಸ್ ನಿಲ್ದಾಣ, ತಾಲೂಕು ಪಂಚಾಯತ್, ಕನ್ನಡಾಂಬೆ ವೃತ್ತ ಮಾರ್ಗವಾಗಿ ಎಪಿಎಂಸಿ ವೃತ್ತದವರೆಗೆ ಸಾಗಿತು. ನೂರಾರು ರೈತರು ನಾಶವಾದ ಬೆಳೆಗಳನ್ನು ಕೈಯಲ್ಲಿ ಹಿಡಿದು ಮೆರವಣಿಗೆಯಲ್ಲಿ ಭಾಗವಹಿಸಿದರು. ಶಾಸಕ ಪ್ರಭು ಚವ್ಹಾಣ ಅವರು ತಲೆಯ ಮೇಲೆ ಒಣಗಿದ ಬೆಳೆ ಹೊತ್ತು ಪ್ರತಿಭಟನೆಯಲ್ಲಿ ಪಾಲ್ಗೊಂಡು ರೈತರೊಂದಿಗೆ ಐಕ್ಯತೆ ವ್ಯಕ್ತಪಡಿಸಿದರು.

ಮೆರವಣಿಗೆಯುದ್ದಕ್ಕೂ ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಬಳಿಕ ನಾಶವಾದ ಬೆಳೆಗಳನ್ನು ಹೆದ್ದಾರಿಯಲ್ಲಿ ಸುರಿದು ಆಕ್ರೋಶ ವ್ಯಕ್ತಪಡಿಸಿ ಕೆಲಕಾಲ ರಸ್ತೆ ತಡೆ ನಡೆಸಿದರು.

ಈ ವೇಳೆ ಮಾತನಾಡಿದ ಶಾಸಕ ಪ್ರಭು ಚವ್ಹಾಣ, ಸರ್ಕಾರ ಯಾರದ್ದೇ ಆಗಿರಲಿ ರೈತರಿಗೆ ನ್ಯಾಯ ದೊರೆಯಬೇಕು. ಔರಾದ್ ತಾಲೂಕನ್ನು ಕೂಡಲೇ ಬರ ಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಒತ್ತಾಯಿಸಿದರು.

10 ದಿನಗಳೊಳಗೆ ಬರಗಾಲ ಘೋಷಣೆ ಮಾಡದಿದ್ದರೆ ಮುಖ್ಯಮಂತ್ರಿಯವರ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಹಾಗೂ ಔರಾದ್‌ನಿಂದ ಬೀದರ್‌ವರೆಗೆ ಬೀದರ್ ಚಲೋ ಪಾದಯಾತ್ರೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಬೀದರ್ ಜಿಲ್ಲೆಯ ಇತರೆ ಎಲ್ಲಾ ತಾಲೂಕುಗಳನ್ನು ಬರ ಪೀಡಿತವೆಂದು ಘೋಷಿಸಿರುವ ಸರ್ಕಾರ, ಔರಾದ್ ತಾಲೂಕನ್ನು ಮಾತ್ರ ಕಡೆಗಣಿಸಿದೆ. ಈ ತಾರತಮ್ಯವನ್ನು ಕೂಡಲೇ ಸರಿಪಡಿಸಬೇಕು ಎಂದು ಅವರು ಆಗ್ರಹಿಸಿದರು.

ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು, ರೈತರ ಬೆಳೆ ಸಾಲ ಮನ್ನಾ ಮಾಡಬೇಕು ಹಾಗೂ ಔರಾದ್ ತಾಲೂಕನ್ನು ತಕ್ಷಣವೇ ಬರ ಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಒತ್ತಾಯಿಸಿ ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್, ಬಿಜೆಪಿ ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ, ಮುಖಂಡರಾದ ಕಿರಣ್ ಪಾಟೀಲ್, ಅರಹಂತ್ ಸಾವಳೆ, ಚಂದು ಪಾಟೀಲ್, ವಿಜಯಲಕ್ಷ್ಮಿ ಕೌಟಗೆ, ವಸಂತ್ ಬಿರಾದಾರ್ ಶಿವಾಜಿರಾವ್ ಪಾಟೀಲ್ ಮುಂಗನಾಳ್, ಧೊಂಡಿಬಾ ನರೋಟೆ, ಶಿವರಾಜ್ ಅಲ್ಮಾಜೆ, ಪ್ರಕಾಶ್ ಅಲ್ಮಾಜೆ, ಬಸವರಾಜ್ ಪಾಟೀಲ್, ಖಂಡೋಬಾ ಕಂಗಟೆ, ಪ್ರಕಾಶ್ ಮೇತ್ರೆ, ಪ್ರದೀಪ್ ಪವಾರ್ ಹಾಗೂ ಆನಂದ್ ದ್ಯಾಡೆ ಸೇರಿದಂತೆ ಕಾರ್ಯಕರ್ತರು, ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಇಂದಿನಿಂದ 3 ದಿನಗಳ ವಿಧಾನ ಮಂಡಲದ ವಿಶೇಷ ಅಧಿವೇಶನ

ಸಮತೋಲನದಿಂದ ಚರ್ಚಿಸಿ ರಾಜ್ಯದ ನಿಲುವನ್ನು ಕೇಂದ್ರಕ್ಕೆ ತಲುಪಿಸುವ ಹೊಣೆಗಾರಿಕೆ ವಿಶೇಷ ಅಧಿವೇಶನದ ಮೇಲಿದೆ. ಕಸ್ತೂರಿರಂಗನ್ ಕರಡು ಅಧಿಸೂಚನೆ ಕುರಿತು ರಾಜ್ಯದ ನಿಲುವು ಮತ್ತು ಬರ ಪರಿಹಾರಕ್ಕಾಗಿ ಕೇಂದ್ರದ ನೆರವು ಪಡೆಯುವ ಕಾರ್ಯತಂತ್ರದ ಬಗ್ಗೆ ಅಧಿವೇಶನದಲ್ಲಿ ಮಹತ್ವದ ಚರ್ಚೆ ನಡೆಯುವ ನಿರೀಕ್ಷೆಯಿದೆ.

ಕಲ್ಲೂರು ಸಮೀಪ ಭೀಕರ ರಸ್ತೆ ಅಪಘಾತ: ನಾಲ್ವರಿಗೆ ಗಂಭೀರ ಗಾಯ

ಸಂಬಂಧಪಟ್ಟ ಹೆದ್ದಾರಿ ಪ್ರಾಧಿಕಾರ ಹಾಗೂ ಪೊಲೀಸ್ ಇಲಾಖೆ ತಕ್ಷಣ ಕ್ರಮ ಕೈಗೊಂಡು ಬಾಗಿರುವ ಬೀದಿ ದೀಪದ ಕಂಬವನ್ನು ಸುರಕ್ಷಿತವಾಗಿ ತೆರವುಗೊಳಿಸಬೇಕು. ಜೊತೆಗೆ ಅಪಘಾತಕ್ಕೀಡಾದ ವಾಹನವನ್ನು ರಸ್ತೆ ಬದಿಗೆ ಸ್ಥಳಾಂತರಿಸಿ, ಇತರೆ ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ

ಅಪಘಾತಕ್ಕೆ ನಿಖರ ಕಾರಣ ಏನು ಎಂಬುದು ಇನ್ನೂ ತಿಳಿದುಬಂದಿಲ್ಲ.

ಯಾವುದೇ ದುರ್ಘಟನೆಗಳು ನಡೆಯದಂತೆ ಜಿಲ್ಲಾಡಳಿತಕ್ಕೆ ಸಹಕರಿಸಿ

ಚೂರಿನ ಕಾಸಭಾವಿಗೆಹೋದಾಗ ಜನರನ್ನು ಒಳಗೆ ಬಿಡದಂತೆ ಕಟ್ಟುನಿಟ್ಟಾಗಿ ನಿರ್ಬಂಧಿಸಬೇಕು. ಹಿಂದೆ ಕಾಲು ಜಾರಿ ಒಬ್ಬರು ಒಳಗೆ ಬಿದ್ದ ಘಟನೆ ನಡೆದಿದೆ. ಕಾರ್ಪೊರೇಷನ್ ವತಿಯಿಂದ ಗಣಪತಿಗಳನ್ನು ಕ್ರೈನ್ ಮೂಲಕ ಅಥವಾ ನಿಗದಿತ ರೀತಿಯಲ್ಲಿ ಮಾತ್ರ ವಿಸರ್ಜನೆ ಮಾಡಬೇಕು. ಅಲ್ಲದೆ ರಾತ್ರಿ 11 ಗಂಟೆಯ ನಂತರ ಬ್ಯಾರಿಕೇಡ್ ದಾಟಿ ಯಾರೂ ಮುಂದೆ ಹೋಗದಂತೆ ಎಚ್ಚರವಹಿಸಬೇಕು ಎಂದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಕುಡಿದುಕೊಂಡು ಯಾವುದೇ ಕಾರಣಕ್ಕೂ ಟ್ರ್ಯಾಕ್ಟರ್ ಆಟೋ, ಕಾರು ಅಥವಾ ವಿಸರ್ಜನಾ ಸ್ಥಳಗಳಿಗೆ ಬರಬಾರದು. ಕಳೆದ ಒಂದು ವಾರದಿಂದ ನಿರಂತರವಾಗಿ ಕಾರ್ಪೊರೇಷನ್ ವತಿಯಿಂದ ಮೈಕ್ ಸಿಸ್ಟಮ್ ಯೂಸ್ ಮಾಡಿ ಕಾಲ್ಸೆಂಟರ್ ಹತ್ತಿರ ಅನೌನ್ಸ್ಮೆಂಟ್ಸ್ ಮಾಡ್ತಾ ಇದ್ದೀವಿ. ಕೆಲವರು ಕಾರ್ಪೊರೇಷನ್ ಸಿಬ್ಬಂದಿಗಳಿಗೆ ಕೆಟ್ಟ ವರ್ತನೆ ಮಾಡೋದು, ಅವರಿಗೆ ಬಾಯೋದು, ಇವರು ಯಾರು ನಮಗೆ ನಿರ್ದೇಶಲಿಕ್ಕೆ ಅಂತಾನೂ ಹೇಳುವಂತಹ ವಿಚಾರ ಕೂಡ ನಮಗೆ ಕಂಡುಬಂದಿದೆ. ದಯವಿಟ್ಟು ಸರ್ಕಾರಿ ಸಿಬ್ಬಂದಿಗಳೊಂದಿಗೆ ಗಲಾಟೆ ಮಾಡಬಾರದು. ಶಬ್ದ ಮಾಲಿನ್ಯ ನಿಯಂತ್ರಣ ನಿಯಮಗಳು 2000 ಮತ್ತೆ 2005ರಂತೆ ಸಂಬಂಧಿಸಿದ ಅಧಿಕಾರಿಗಳಿಂದ ಲೈಸೆನ್ಸ್ ಪಡೆಯಬೇಕು ಎಂದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ ಅವರು ಮಾತನಾಡಿ, ಜನರು ಹೆಲ್ಮೆಟ್ ಧರಿಸಬೇಕು. ತಮ್ಮ ಪ್ರಾಣಕ್ಕೆ ಬೆಲೆ ಕೊಡದೆ ಹೋದರೆ ಬೇರೆಯವರ ಪ್ರಾಣಕ್ಕೆ ಹೇಗೆ ಬೆಲೆ ಕೊಡಲು ಸಾಧ್ಯ. ಹೆಲ್ಮೆಟ್ ಹಾಕದೆ, ಗಾಡಿಯನ್ನು ವೇಗವಾಗಿ ಚಲಾಯಿಸಬಾರದು. ಇತ್ತೀಚೆಗೆ ಸಿಂಧೂರಿನಲ್ಲಿ ಅತ್ಯಂತ ಉತ್ತಮವಾಗಿ ಗಣೇಶ ವಿಸರ್ಜನೆ ಮಾಡಲಾಗಿದೆ. ಅದೇ ರೀತಿಯಲ್ಲಿ ಜಿಲ್ಲೆಯ ಎಲ್ಲ ಕಡೆ ವಿಸರ್ಜನೆ ಮಾಡಬೇಕು. ಗಜಾನನ ಮಂಡಳಿಯವರು ಸರಿಯಾದ ಸಮಯಕ್ಕೆ ಧ್ವನಿವರ್ಧಕಗಳನ್ನು ಬಂದ್ ಮಾಡಬೇಕು. ಅಲ್ಲದೆ ಎಲ್ಲರೂ ಸಮಯವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದರು.

ಗಣೇಶ ವಿಸರ್ಜನೆ ವೇಳೆಯಲ್ಲಿ ಡಿಜೆ ಬಳಕೆಯಿಂದಾಗಿ ಮಕ್ಕಳು, ವೃದ್ಧರು, ಆಸ್ಪತ್ರೆಗಳಿಗೆ ಯಾವುದೇ ರೀತಿಯ ತೊಂದರೆ ಅಥವಾ ಪರಿಣಾಮ ಉಂಟಾಗದಂತೆ ಪೊಲೀಸ್ ಇಲಾಖೆಯೊಂದಿಗೆ ಸಂಪೂರ್ಣ ಸಹಕರಿಸುವಂತೆ ವಿವಿಧ ಗಜಾನನ ಮಂಡಳಿಗಳಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ನಿರ್ದೇಶನ ನೀಡಿದರು.

08 ಪ್ರಕರಣ ದಾಖಲು: ರಾಯಚೂರು ಜಿಲ್ಲೆಯಲ್ಲಿ ಸಾರ್ವಜನಿಕ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಮೆರವಣಿಗೆ ವೇಳೆ ನಿಗದಿತ ಮಿತಿಗಿಂತ ಹೆಚ್ಚಿನ ಶಬ್ದದ ಡಿಜೆ ಬಳಕೆ ಮಾಡಿ ಶಬ್ದ ಮಾಲಿನ್ಯ ನಿಯಮಾವಳಿ ಉಲ್ಲಂಘಿಸಿದ ಡಿಜೆ ಮಾಲಕರು ಹಾಗೂ ಆಪರೇಟರ್‌ಗಳ ವಿರುದ್ಧ 8 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ ಅವರು ತಿಳಿಸಿದರು.

ಇತ್ತೀಚೆಗೆ ರಾಯಚೂರು ನಗರದ ಜಹೀರಾಬಾದಿನಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಟ್ರ್ಯಾಕ್ಟರ್ ಹರಿದು ಇಬ್ಬರು ಬಾಲಕರ ದುರ್ಮರಣ ಹೊಂದಿದ ಹಿನ್ನೆಲೆಯಲ್ಲಿ ಸಭೆಯಲ್ಲಿ ಒಂದು ನಿಮಿಷ ಕಾಲ ಮೌನಚರಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹರೀಶ್, ರಾಯಚೂರು ಡಿವೈಎಸ್ಪಿ ಶಾಂತಮೂರ್ತಿ, ರಾಯಚೂರು ತಹಶಿಲ್ದಾರ್ ಸುರೇಶ ವರ್ಮಾ, ಜೋನಲ್ ಆಯುಕ್ತ ಮಲ್ಲಿಕಾರ್ಜುನ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಗಜಾನನ ಮಂಡಳಿಯ ಪದಾಧಿಕಾರಿಗಳು, ವಿವಿಧ ಸಂಘಟನೆಯ ಮುಖಂಡರು ಸಭೆಯಲ್ಲಿ ಇದ್ದರು.

ಪತ್ರಕರ್ತರ ರಾಜ್ಯ ಸಮ್ಮೇಳನ: ಶಾಸಕ ದದ್ದಲ್ ಜೊತೆ ಪೂರ್ವಭಾವಿ ಸಭೆ

ಸದಸ್ಯರಾದ ಸುರೇಶ ರೆಡ್ಡಿ, ನೀಲಕಂಠ ಸ್ವಾಮಿ , ಪ್ರಸನ್ನ ಜೈನ್, ಪತ್ರಕರ್ತರಾದ ಸತೀಶ್ ಹಿರೇಮಠ್, ಅಣ್ಣಪ್ಪ ಮೇಟಿ ಗೌಡ, ಸಂಘದ ಸದಸ್ಯರಾದ ಖಾದರ್, ಮೊಹ್ಮದ್ ಜಿಲಾನಿ, ಕೃಷ್ಣ ಇನಂದಾರ್, ಮಂಜು ಎತ್ತಿನಮಾಳಗಿ, ಬಾಲು ಸೇರಿದಂತೆ ಇತರರು ಇದ್ದರು.

ಡಿಜೆ ಬಿಟ್ಟು ಸಾಂಸ್ಕೃತಿಕವಾಗಿ ಗಣೇಶೋತ್ಸವ ಆಚರಿಸಿ : ಎ. ಪಾಪಾರೆಡ್ಡಿ

ಕಾರ್ಯಕ್ರಮಗಳನ್ನು ಆಯೋಜಿಸಿ, ಮಹಿಳೆಯರು, ಮಕ್ಕಳು ಹಾಗೂ ಕುಟುಂಬಗಳು ಸುರಕ್ಷಿತವಾಗಿ ಭಾಗವಹಿಸುವಂತಹ ಹಬ್ಬದ ವಾತಾವರಣ ನಿರ್ಮಿಸಬೇಕು ಎಂದರು.

ಗೀತಾ ಮಂದಿರ ಮಾದರಿ ಅನುಸರಿಸಲು ಕರೆ : ನಗರದ ಗೀತಾ ಮಂದಿರದಲ್ಲಿ ಗಣೇಶೋತ್ಸವವನ್ನು ಅಚ್ಚುಕಟ್ಟಾಗಿ ಹಾಗೂ ಶಿಸ್ತಿನಿಂದ ಆಚರಿಸುವ ರೀತಿಯನ್ನು ಜಿಲ್ಲೆಯ ಇತರ ಗಣೇಶೋತ್ಸವ ಸಮಿತಿಗಳೂ ಅನುಸರಿಸಬೇಕು. ಹಬ್ಬದ ಧಾರ್ಮಿಕ ಮತ್ತು ಸಾಂಸ್ಕೃತಿಕ ಮೌಲ್ಯವನ್ನು ಉಳಿಸಿಕೊಂಡು ಗಣೇಶೋತ್ಸವ ಆಚರಿಸಬೇಕಾಗಿದೆ ಎಂದರು.


ಹೈದರಾಬಾದ್, ಮಹಾರಾಷ್ಟ್ರ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಹಬ್ಬದ ವಾತಾವರಣ ನಿರ್ಮಿಸಿ, ನಿಗದಿತ ಸಮಯದೊಳಗೆ ವಿಸರ್ಜನೆ ಮಾಡುವ ಪದ್ಧತಿ ಇದೆ. ಅದೇ ರೀತಿಯಲ್ಲಿ ಇಲ್ಲಿಯೂ ಶಿಸ್ತುಬದ್ಧವಾಗಿ ಗಣೇಶೋತ್ಸವ ಆಚರಿಸಬಹುದು ಎಂದು ಹೇಳಿದರು.

ಅಧಿಕಾರಿಗಳ ಸೂಚನೆ ಪಾಲಿಸುವುದು ಎಲ್ಲರ ಜವಾಬ್ದಾರಿ: ಗಣೇಶೋತ್ಸವ ಸಮಿತಿಗಳು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯ ಸೂಚನೆಗಳನ್ನು ಪಾಲಿಸಬೇಕು. ಮೆರವಣಿಗೆಯಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡಬಾರದು. ಯುವಕರು ಹಾಗೂ ಆಯೋಜಕರು ಜವಾಬ್ದಾರಿಯಿಂದ ನಡೆದುಕೊಂಡು ಗಣೇಶೋತ್ಸವವನ್ನು ಶಾಂತಿ, ಸೌಹಾರ್ದತೆ ಮತ್ತು ಭಕ್ತಿಯ ಹಬ್ಬವನ್ನಾಗಿ ರೂಪಿಸಬೇಕು ಎಂದು ಪಾಪಾರೆಡ್ಡಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಬಾಬುರಾವ್, ಶ್ರೀನಿವಾಸರೆಡ್ಡಿ, ಬೆಟ್ಟಪ್ಪ, ರಾಜಕುಮಾರ್, ಕೋಡ್ಲುಗ್ಳ ಅಂಜನೇಯ, ನರಸಪ್ಪ, ನರ್ಸಿರೆಡ್ಡಿ, ಬೆಂಗಿ ನರಸಾರೆಡ್ಡಿ, ಅಸ್ಕಿಹಾಳ ಬಸವರಾಜ ಹಾಗೂ ಗೋವಿಂದ ಉಪಸ್ಥಿತರಿದ್ದರು

ಗಣೇಶ ಮೆರವಣಿಗೆ ವೇಳೆ ದುರಂತ : ಮೃತರ ಕುಟುಂಬಕ್ಕೆ ಪರಿಹಾರ ನೀಡಲು ಬಾಬುರಾವ್ ಆಗ್ರಹ

ರಾಯಚೂರು,ಸೆ.20– ನಗರದ ಎಂ.ಈರಣ್ಣ ವೃತ್ತದಲ್ಲಿ ಗಣೇಶ ಮೆರವಣಿಗೆ ವೇಳೆ ಟ್ರ್ಯಾಕ್ಟರ್ ಹರಿದು ಇಬ್ಬರು ಬಾಲಕರು ಮೃತಪಟ್ಟಿರುವ ಘಟನೆ ಅತ್ಯಂತ ದುರದೃಷ್ಟಕರವಾಗಿದ್ದು, ಮೃತರ ಕುಟುಂಬಗಳಿಗೆ ರಾಜ್ಯ ಸರ್ಕಾರ ತಕ್ಷಣ ಪರಿಹಾರ ಘೋಷಿಸಬೇಕು ಎಂದು ಸಮಾಜ ಕಾರ್ಯಕರ್ತ ಡಾ. ಬಾಬುರಾವ್ ಆಗ್ರಹಿಸಿದ್ದಾರೆ.



ಗಣೇಶೋತ್ಸವದ ಸಂಭ್ರಮದಲ್ಲಿದ್ದ ಸಂದರ್ಭದಲ್ಲಿ ನಡೆದ ಈ ದುರಂತ ಎರಡು ಕುಟುಂಬಗಳಿಗೆ ಆಘಾತ ತಂದಿದೆ. ಬಾಲಕರನ್ನು ಕಳೆದುಕೊಂಡ ಕುಟುಂಬಗಳ ನೋವಿಗೆ ಸರ್ಕಾರ ಸ್ಪಂದಿಸಿ ಮಾನವೀಯ ನೆಲೆಯಲ್ಲಿ ಸೂಕ್ತ ಆರ್ಥಿಕ ನೆರವು ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಸಂತ್ರಸ್ತ ಕುಟುಂಬಗಳ ನೆರವಿಗೆ ಧಾವಿಸಬೇಕು. ಕುಟುಂಬದ ಸದಸ್ಯರನ್ನು ಭೇಟಿ ಮಾಡಿ ಸಾಂತ್ವನ ಹೇಳುವುದರ ಜತೆಗೆ ಸರ್ಕಾರದಿಂದ ಪರಿಹಾರ ದೊರಕಿಸುವಲ್ಲಿ ಮುತುವರ್ಜಿ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

ಮುಂದಿನ ದಿನಗಳಲ್ಲಿ ಧಾರ್ಮಿಕ ಮೆರವಣಿಗೆಗಳ ಸಂದರ್ಭದಲ್ಲಿ ಇಂತಹ ದುರ್ಘಟನೆಗಳು ಮರುಕಳಿಸದಂತೆ ಪೊಲೀಸ್ ಇಲಾಖೆ ಹಾಗೂ ಜಿಲ್ಲಾಡಳಿತ ಕಟ್ಟುನಿಟ್ಟಿನ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಡಾ. ಬಾಬುರಾವ್ ತಿಳಿಸಿದ್ದಾರೆ.

ಶಿಕ್ಷಕರನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ : ವಿಜಯಕುಮಾರ ಪಾಟೀಲ ತೆಗಲತಿಪ್ಪಿ

ಕಾಳಗಿ,ಸೆ.20–

ಶಿಕ್ಷಕರನ್ನು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದ್ದು, ಸಮಾಜಕ್ಕೆ ಯೋಗ್ಯ ನಾಗರಿಕರನ್ನು ರೂಪಿಸುವಲ್ಲಿ ಅವರ ಪಾತ್ರ ಅಮೂಲ್ಯವಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ವಿಜಯಕುಮಾರ ಪಾಟೀಲ ತೆಗಲತಿಪ್ಪಿ ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಸಾರ್ಥಕ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ದೇಶದ ಭವಿಷ್ಯವನ್ನು ರೂಪಿಸುವಲ್ಲಿ ಶಿಕ್ಷಕರ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ. ಶಿಕ್ಷಕರಿಗೆ ಯೋಗ್ಯ ಗೌರವ ನೀಡುವುದು ಕೇವಲ ಶಿಷ್ಟಾಚಾರವಲ್ಲ, ಅದು ನಮ್ಮ ಸಂಸ್ಕೃತಿಯ ಭಾಗವಾಗಿದೆ. ಇದೇ ಉದ್ದೇಶದಿಂದ ಕನ್ನಡ ಸಾಹಿತ್ಯ ಪರಿಷತ್ ಉತ್ತಮ ಶಿಕ್ಷಕರನ್ನು ಗುರುತಿಸಿ ಸಾರ್ಥಕ ಶಿಕ್ಷಕ ಪ್ರಶಸ್ತಿ ನೀಡಿ ಸನ್ಮಾನಿಸುತ್ತಿದೆ ಎಂದು ಹೇಳಿದರು.



ನಿಕಟಪೂರ್ವ ಜಿಲ್ಲಾ ಪಂಚಾಯಿತಿ ಸದಸ್ಯ ರಾಜೇಶ್ ಜಗದೇವ ಗುತ್ತೇದಾರ ಮಾತನಾಡಿ, ಭಾರತೀಯ ಸಂಸ್ಕೃತಿಯಲ್ಲಿ ಆಚಾರ್ಯ ದೇವೋ ಭವ ಎಂದು ಶಿಕ್ಷಕರಿಗೆ ದೇವರ ಸ್ಥಾನಮಾನ ನೀಡಲಾಗಿದೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿ ಹಾಗೂ ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಶಿಕ್ಷಕರ ಶ್ರಮವನ್ನು ಗೌರವಿಸಬೇಕು ಎಂದು ಹೇಳಿದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಸಂತೋಷ ಕಲಮೂಡ ಮಾತನಾಡಿ, ಯಾವುದೇ ಫಲಾಪೇಕ್ಷೆಯಿಲ್ಲದೆ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗಾಗಿ ಶ್ರಮಿಸುವ ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು ಎಂದು ಹೇಳಿದರು.

ಸುಲೇಪೇತ ಪೂಜ್ಯ ಪ್ರಭುದೇವರು ಆಶೀರ್ವಚನ ನೀಡಿದರು. ಸಂಶೋಧಕ ಸಾಹಿತಿ ಗುಂಡೇರಾವ ಮುಡಬಿ, ಪ್ರೌಢ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಶಿವಕುಮಾರ್ ಶಾಸ್ತ್ರಿ, ಪ್ರಾಚಾರ್ಯ ಸುಭಾಷ್ ಶಿಲವಂತ, ಕಸಾಪ ತಾಲೂಕಾಧ್ಯಕ್ಷ ಸಂತೋಷ ಕುಡಳ್ಳಿ ಮಾತನಾಡಿದರು.

ಇದೇ ವೇಳೆ ಶಿಕ್ಷಕರಾದ ಪವಿತ್ರಾ ಬಿರೆದಾರ, ಬಸವರಾಜ ಚೇಂಗಟಿ, ಜೈಶ್ರೀ ಮಿಟ್ಟಿಮನಿ, ಶಿವಲಿಂಗಪ್ಪ ಯಳಸಂಗಿ, ಶ್ರೀದೇವಿ ಕಾಪ್ಸೆ , ಚಂದ್ರಕಾಂತ ಮಹಾಗಾಂವ, ಹೇಮಾವತಿ ನರೂಣಿ, ರೇವಣಸಿದ್ದಯ್ಯ ಸಪ್ಪಾಯಗೋಳ, ವಿಜಯಲಕ್ಷ್ಮಿ ಮಂಕಾಣಿ, ರಾಧಾಕೃಷ್ಣ ಮುಚ್ಚಟ್ಟಿ, ಅಂಬವ್ವ ದೊಡ್ಡಮನಿ, ಗಿರಿಜಾ ಮಠಪತಿ, ಅಮೃತ ನಾಟೀಕಾರ, ಸೈಯದ ಸಯೀದಾ ಬೇಗಂ, ರತನಸಿಂಗ್ ಚಿನ್ನಾರಾಠೋಡ, ಶರಣೇಶ್ವರಿ ಪಗಾದಿ, ಚಂದ್ರಕಾಂತ ಗೊಣಗಿಮಠ, ಮಹಾದೇವಿ ಪಾಟೀಲ ಅವರಿಗೆ ಕಸಾಪದಿಂದ ಸಾರ್ಥಕ ಶಿಕ್ಷಕ ಪ್ರಶಸ್ತಿ ಪ್ರಧಾನ ಮಾಡಿ ಸತ್ಕರಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕಸಾಪ ಗೌರವ ಕಾರ್ಯದರ್ಶಿ ಶಿವರಾಜ ಅಂಡಗಿ, ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಅನೀಲಕುಮಾರ ಗುತ್ತೇದಾರ, ಬಸಂತರಾಯ ಪೆದ್ದಿ, ಮಹ್ಮದ ಯೂಸುಫ್ ಖಾನ್, ಪ್ರಮಿಳಾದೇವಿ ಶೇರಿಕಾರ, ಸೇವಂತಾ ಚವ್ಹಾಣ, ಮಹೇಶ ಬಡಿಗೇರ, ಸತೀಶ್ಚಂದ್ರ ಸುಲೇಪೇಠ, ರಾಜೇಂದ್ರಬಾಬು ಹಿರಾಪೂರ, ಸಂತೋಷ ನರನಾಳ, ಸುಲೋಚನಾ ರಾಠೋಡ, ನಾಗಮ್ಮ ಹಿರೇಮಠ, ಮೀರಾಬಾಯಿ ಗಣುರೆ ಸೇರಿದಂತೆ ಅನೇಕರು ಇದ್ದರು.

ಜನರ ಸಮಸ್ಯೆಗಳಿಗೆ ತ್ವರಿತ ಪರಿಹಾರವೇ ಪ್ರಜಾ ಸೇವಾ ಆಂದೋಲನದ ಉದ್ದೇಶ : ಶಾಸಕ ಶರಣಬಸಪ್ಪಗೌಡ ದರ್ಶನಾಪುರ



ಯಾದಗಿರಿ,ಸೆ.20–

ಜನರ ಸಮಸ್ಯೆಗಳನ್ನು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಒಗ್ಗೂಡಿ ಆಲಿಸಿ, ಸಾಧ್ಯವಾದಷ್ಟು ಶೀಘ್ರವಾಗಿ ಇತ್ಯರ್ಥಪಡಿಸುವ ಉದ್ದೇಶದಿಂದ ಪ್ರಜಾ ಸೇವಾ ಆಂದೋ ಲನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವ ಹಾಗೂ ಶಾಸಕ ಶರಣಬಸಪ್ಪಗೌಡ ದರ್ಶನಾಪುರ ಹೇಳಿದರು.

ನಗರದ ಆರಬೋಳ ಕಲ್ಯಾಣ ಮಂಟಪದಲ್ಲಿ ಶನಿವಾರ ನಡೆದ ತಾಲೂಕು ಮಟ್ಟದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅವಧಿಯಲ್ಲಿ ನಡೆದ ಜನ ಸಂಪರ್ಕ ಸಭೆಗಳ ಆಶಯವನ್ನು ಮುಂದುವರಿಸಿಕೊಂಡು ಪ್ರಜಾ ಸೇವಾ ಆಂದೋಲನ ರೂಪಿಸಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರಿ ಕಚೇರಿಗಳಿಗೆ ಪದೇಪದೇ ಅಲೆದಾಡುವ ಪರಿಸ್ಥಿತಿ ತಪ್ಪಿಸುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು. ಅಧಿಕಾರಿಗಳು ಜನರ ಬಳಿಗೆ ತೆರಳಿ ಅವರ ಅಹವಾಲುಗಳನ್ನು ಆಲಿಸಿ, ಸಾಧ್ಯವಾದಷ್ಟು ಸ್ಥಳೀಯ ಮಟ್ಟದಲ್ಲಿಯೇ ಸಮಸ್ಯೆಗಳನ್ನು ಪರಿಹರಿಸಬೇಕು. ಸ್ಥಳೀಯ ಮಟ್ಟ ದಲ್ಲಿ ಇತ್ಯರ್ಥವಾಗದ ಪ್ರಕರಣ ಗಳನ್ನು ಜಿಲ್ಲಾ ಮಟ್ಟಕ್ಕೆ ಹಾಗೂ ಬೆಂಗಳೂರಿನ ಸಂಬಂಧಪಟ್ಟ ಇಲಾ ಖೆಗಳ ಗಮನಕ್ಕೆ ಕೊಂಡೊಯ್ದು ಪರಿಹಾರ ಕಲ್ಪಿಸಲಾಗುವುದು ಎಂದು ಹೇಳಿದರು.

ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ನಗರಸಭೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಸಾರ್ವ ಜನಿಕರ ಸಮಸ್ಯೆಗಳಿಗೆ ತ್ವರಿತ ಮತ್ತು ಸೂಕ್ತ ಪರಿಹಾರ ಒದಗಿಸಬೇಕು ಎಂದು ಶರಣಬಸಪ್ಪಗೌಡ ದರ್ಶನಾಪುರ ಸೂಚಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಪಾಂಡ್ವೆ ರಾಹುಲ್ ತುಕಾರಾವ್, ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ್ ಸಹಾಯಕ ಆಯುಕ್ತ ಶ್ರೀಧರ ಗೋಟೂರ್ ಕೃಷಿ ಇಲಾಖೆ ಜಂಟಿ ನಿರ್ದೇಶಕ ರತೇಂದ್ರನಾಥ್ ಸೂಗೂರ, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಶರಣಪ್ಪ ಪಾಟೀಲ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಸೋಮಶೇಖರ್ ಬಿರೇದಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ ಬಿರಾದಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಚನ್ನಬಸಪ್ಪ ಮುಧೋಳ್, ಪಶುಸಂಗೋಪನೆ ಇಲಾಖೆಯ ಉಪನಿರ್ದೇಶಕ ಡಾ. ರಾಜಶೇಖರ್ ಖಾಸಬಾಗ, ಶಹಾಪುರ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸಿದ್ದಪ್ಪ ಸಾಹು ಆರಗೋಳ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ತಹಸೀಲ್ದಾರ್ ಸಿದ್ದಾರೂಢ ಬನ್ನಿಕೊಪ್ಪ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಶರಬೈ, ನಗರಸಭೆ ಪೌರಾಯುಕ್ತ ಜೀವನ್ ಕಟ್ಟಿಮನಿ, ತಾಲೂಕು ಮಟ್ಟದ ಅಧಿಕಾರಿಗಳು, ಮುಖಂಡರು ಹಾಗೂ ಅರ್ಜಿದಾರರು ಉಪಸ್ಥಿತರಿದ್ದರು.



ಪ್ರಜಾಸೇವಾ ಸಭೆಯಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದ ಶಾಸಕ ರಹೀಂ ಖಾನ್

ಬೀದರ್,ಸೆ.20–

ಚಿಲ್ಲರ್ಗಿ ಗ್ರಾಮದಲ್ಲಿ ಶನಿವಾರ ನಡೆದ ಪ್ರಜಾಸೇವಾ ಸಭೆಯಲ್ಲಿ ಶಾಸಕ ರಹೀಂ ಖಾನ್ ಅವರು ಸಮಾಜದ ವಿವಿಧ ವರ್ಗಗಳ ಜನರಿಂದ ಅಹವಾಲುಗಳನ್ನು ಸ್ವೀಕರಿಸಿ, ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿದರು.

ಸಭೆಯಲ್ಲಿ ರೈತರು, ಕಾರ್ಮಿಕರು, ಮಹಿಳೆಯರು, ವಿಧವೆಯರು, ವಿದ್ಯಾರ್ಥಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು, ಹಿಂದುಳಿದ ವರ್ಗಗಳ ಜನರು ಸೇರಿದಂತೆ ವಿವಿಧ ವರ್ಗಗಳ ಸಾರ್ವಜನಿಕರು ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಶಾಸಕರ ಗಮನಕ್ಕೆ ತಂದರು.

ಕುಡಿಯುವ ನೀರು, ವಿದ್ಯುತ್, ಪಿಂಚಣಿ, ಬೆಳೆ ನಷ್ಟ, ಶಾಲಾ ಮೂಲಸೌಕರ್ಯ, ಶಿಕ್ಷಣ ಸಾಲ, ರೈತರ ಸಬ್ಸಿಡಿ, ಪಶುಸಂಗೋಪನೆ, ಗ್ರಾಮೀಣ ವಸತಿ ಹಾಗೂ ಜೀವನೋಪಾಯ ಸೇರಿದಂತೆ ಹಲವು ಸಮಸ್ಯೆಗಳ ಕುರಿತು ಸಾರ್ವಜನಿಕರು ಅಹವಾಲು ಸಲ್ಲಿಸಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಖುದ್ದಾಗಿ ಆಲಿಸಿದ ಶಾಸಕ ರಹೀಂ ಖಾನ್, ತುರ್ತಾಗಿ ಪರಿಹರಿಸಬಹುದಾದ ಸಮಸ್ಯೆಗಳಿಗೆ ಸ್ಥಳದಲ್ಲೇ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಉಳಿದ ಅಹವಾಲುಗಳನ್ನು ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತಂದು, ನಿಯಮಾನುಸಾರ ಶೀಘ್ರವಾಗಿ ಇತ್ಯರ್ಥಪಡಿಸುವಂತೆ ನಿರ್ದೇಶನ ನೀಡಿದರು.

ಚಿಲ್ಲರ್ಗಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಿಸುವ ನಿಟ್ಟಿನಲ್ಲಿ ಗ್ರಾಮದ ಮಾಳೆಗಾಂವ್ ರಸ್ತೆಯಲ್ಲಿ ಬೋರ್‌ವೆಲ್ ಕೊರೆತ ಕಾಮಗಾರಿಗೆ ಶಾಸಕ ರಹೀಂ ಖಾನ್ ಚಾಲನೆ ನೀಡಿದರು. ಗ್ರಾಮಸ್ಥರಿಗೆ ಶೀಘ್ರದಲ್ಲೇ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದಾಗಿ ಭರವಸೆ ನೀಡಿದರು.



ಬಂಧಿತ ರೈತ ಮುಖಂಡರ ಬಿಡುಗಡೆಗೆ ಸಿಪಿಎಂ ಒತ್ತಾಯ

ಕಲಬುರಗಿ,ಸೆ.20–


ನೈಸ್ ಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ನೀಡಿರುವ ತೀರ್ಪನ್ನು ಜಾರಿಗೊಳಿಸಿ, ರೈತರಿಗೆ ಭೂಮಿಯನ್ನು ವಾಪಸ್ ನೀಡಬೇಕು ಹಾಗೂ ನೈಸ್ ಸಂಸ್ಥೆಯ ಟೋಲ್ ಸಂಗ್ರಹವನ್ನು ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಪಕ್ಷದ ಜಿಲ್ಲಾ ಕಾರ್ಯದರ್ಶಿ ಕೆ. ನೀಲಾ, 2026ರ ಜುಲೈ 29ರಂದು ಕರ್ನಾಟಕ ಹೈಕೋರ್ಟ್ ನೈಸ್ ಯೋಜನೆಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆ ಕುರಿತು ಮಹತ್ವದ ತೀರ್ಪು ನೀಡಿದ್ದು, ಭೂಸ್ವಾಧೀನ, ಪರಿಹಾರ ಪಾವತಿ ಹಾಗೂ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದ ಹಲವು ಅಂಶಗಳ ಬಗ್ಗೆ ಸ್ಪಷ್ಟ ಅಭಿಪ್ರಾಯ ವ್ಯಕ್ತಪಡಿಸಿದೆ ಎಂದು ಹೇಳಿದರು. ಹೈಕೋರ್ಟ್ ತೀರ್ಪು ಹೊರಬಂದು ಹಲವು ದಿನಗಳು ಕಳೆದರೂ ರಾಜ್ಯ ಸರ್ಕಾರ ಅದನ್ನು ಜಾರಿಗೊಳಿಸಲು ಅಗತ್ಯ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ ಅವರು, ತೀರ್ಪಿನ ಅನುಷ್ಠಾನಕ್ಕೆ ಆಗ್ರಹಿಸಿ ಪ್ರಜಾಸತ್ತಾತ್ಮಕವಾಗಿ ಪ್ರತಿಭಟನೆ ನಡೆಸುತ್ತಿದ್ದ ರೈತರು ಹಾಗೂ ಕಾರ್ಮಿಕ ಸಂಘಟನೆಗಳ ಮುಖಂಡರನ್ನು ಬಂಧಿಸುವ ಮೂಲಕ ಪ್ರತಿಭಟನೆಯನ್ನು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು.

ಪ್ರತಿಭಟನೆಯ ಹಿನ್ನೆಲೆಯಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯಾಧ್ಯಕ್ಷ ಯು. ಬಸವರಾಜ, ಮುಖಂಡರಾದ ಎನ್. ವೆಂಕಟಾಚಲಯ್ಯ, ಶಿವಣ್ಣ, ಚಂದ್ರಣ್ಣ ಹಾಗೂ ಕಾರ್ಮಿಕ ಮುಖಂಡ ಮಹಾಂತೇಶ್ ಸೇರಿದಂತೆ ಹಲವರನ್ನು ಬಂಧಿಸಲಾಗಿದೆ. ಬಂಧಿತ ಎಲ್ಲ ಮುಖಂಡರನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ನೈಸ್ ಯೋಜನೆಗಾಗಿ ವಶಪಡಿಸಿಕೊಂಡಿರುವ ಭೂಮಿಯನ್ನು ರೈತರಿಗೆ ವಾಪಸ್ ನೀಡುವುದು, ಟೋಲ್ ಸಂಗ್ರಹವನ್ನು ನಿಲ್ಲಿಸುವುದು ಹಾಗೂ ಪ್ರಜಾಸತ್ತಾತ್ಮಕ ಪ್ರತಿಭಟನೆಗಳಿಗೆ ಅವಕಾಶ ಕಲ್ಪಿಸುವಂತೆ ಸರ್ಕಾರಕ್ಕೆ ಆಗ್ರಹಿಸಿದರು.

ದಸರಾ ಸಿಎಂ ಕಪ್-2026 ಕ್ರೀಡಾಕೂಟಕ್ಕೆ ಚಾಲನೆ



ಕಲಬುರಗಿ,ಸೆ.20–

ಗೆಲುವು-ಸೋಲು ಮುಖ್ಯವಲ್ಲ; ಪ್ರತಿಯೊಬ್ಬ ಕ್ರೀಡಾಪಟು ಕ್ರೀಡಾ ಸ್ಫೂರ್ತಿಯಿಂದ ಸ್ಪರ್ಧೆಯಲ್ಲಿ ಭಾಗವಹಿಸಿ, ಸಂತಸದಿಂದ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವುದು ಅತ್ಯಂತ ಮುಖ್ಯ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.

ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ದಸರಾ ಸಿಎಂ ಕಪ್-2026 ಕ್ರೀಡಾಕೂಟಕ್ಕೆ ಕ್ರೀಡಾ ಧ್ವಜಾರೋಹಣ, ಬಲೂನ್ ಹಾರಿಸುವಿಕೆ ಮತ್ತು ಕ್ರೀಡಾ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಗೆಲುವಿಗಿಂತ ಭಾಗವಹಿಸುವ ಮನೋಭಾವ, ಶಿಸ್ತು ಮತ್ತು ಕ್ರೀಡಾ ಸ್ಫೂರ್ತಿಯೇ ಮುಖ್ಯ. ಕ್ರೀಡಾಪಟುಗಳು ಯಾವುದೇ ಭೇದಭಾವವಿಲ್ಲದೆ ಉತ್ಸಾಹದಿಂದ ಸ್ಪರ್ಧಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು. ಇಂತಹ ಕ್ರೀಡಾಕೂಟಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಶಿಸ್ತು ಹಾಗೂ ತಂಡದ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿರುವ ಕ್ರೀಡಾಪಟುಗಳಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ ಎಂಬುದನ್ನು ಅಧಿಕಾರಿಗಳಿಂದ ಪರಿಶೀಲಿಸಿದ ಅವರು, ಕುಡಿಯುವ ನೀರು, ಆಹಾರ ಮತ್ತು ತುರ್ತು ಆರೋಗ್ಯ ಸೇವೆಗಾಗಿ ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಿರುವ ಕುರಿತು ಮಾಹಿತಿ ಪಡೆದರು.


ಈ ಸಂದರ್ಭದಲ್ಲಿ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಎಲ್ಲ ಕ್ರೀಡಾಪಟುಗಳಿಗೆ ದಸರಾ ಹಬ್ಬದ ಶುಭಾಶಯಗಳನ್ನು ತಿಳಿಸಿ, ಕ್ರೀಡಾಕೂಟ ಯಶಸ್ವಿಯಾಗಲಿ ಎಂದು ಹಾರೈಸಿದರು.

ಜಿಲ್ಲಾ ಮಟ್ಟದ ಈ ಕ್ರೀಡಾಕೂಟದಲ್ಲಿ ಕಬಡ್ಡಿ, ಖೋ-ಖೋ, ಥ್ರೋಬಾಲ್, ಯೋಗ, ಫುಟ್‌ಬಾಲ್, ಅಥ್ಲೆಟಿಕ್ಸ್ ಮತ್ತು ವಾಲಿಬಾಲ್ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯುತ್ತಿದ್ದು, ಜಿಲ್ಲೆಯ ವಿವಿಧ ತಾಲೂಕುಗಳ ಕ್ರೀಡಾಪಟುಗಳು ಭಾಗವಹಿಸಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ರಾಜಶೇಖರ ಗೋನಾಯಕ್, ಕರ್ನಾಟಕ ರಾಜ್ಯ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಭೋಜನಗೌಡ ಪಾಟೀಲ್, ಸಂಜಯ ಬಾಣದ, ಪ್ರವೀಣ ಪುಣೆ, ರಾಜು ಚೌವ್ಹಾಣ ಸೇರಿದಂತೆ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ಕ್ರೀಡಾಪಟುಗಳು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಯುಪಿಐ ವಹಿವಾಟಿನ ಮೇಲೆ ಶುಲ್ಕದ ಬರೆ

ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಚರ್ಚೆಯಿಲ್ಲದೆ, ತಿದ್ದುಪಡಿಗೊಂಡ ಪಾವತಿ ಮತ್ತು ಒಪ್ಪಂದ ವ್ಯವಸ್ಥೆಗಳ ಕಾನೂನು (, 2007) ಒದಗಿಸಿರುವ ಅಧಿಕಾರವನ್ನು ಉಪಯೋಗಿಸಿ ಕೇಂದ್ರ ಸರಕಾರವು ಅಕ್ಟೋಬರ್ 15ರಿಂದ ಜಾರಿಗೆ ಬರುವಂತೆ ಯುಪಿಐ ಅಂದರೆ ಏಕೀಕೃತ ಪಾವತಿ ವ್ಯವಸ್ಥೆಯ (ಯುನಿಫೈಡ್ ಪೇಮೆಂಟ್ಸ್ ಇಂಟರ್ ಫೇಸ್) ಮೂಲಕ ಮಾಡುವ ಪಾವತಿಗಳ ಮೇಲೆ ಷರತ್ತುಬದ್ಧವಾಗಿ ಶುಲ್ಕವನ್ನು ವಿಧಿಸಿದೆ. ರೂ. 2,000 ಮತ್ತು ಮೇಲ್ಪಟ್ಟ ಪಾವತಿಗೆ ಶೇ. 0.4ರಷ್ಟು ಶುಲ್ಕವನ್ನು ಎಂಡಿಆರ್-ರ್ಮರ್ಚಂಟ್ ಡಿಸ್ಕೌಂಟ್ ರೇಟ್-ಎಂಬ ಹೆಸರಿನಲ್ಲಿ ವ್ಯಾಪಾರಿಗಳು ತೆರಬೇಕಾಗುತ್ತದೆ. ರೂ. 2,000 ತನಕ ರುಪೇ ಡೆಬಿಟ್ ಕಾರ್ಡ್ ಮತ್ತು ಯುಪಿಐಯ ಮೂಲಕ ಮಾಡುವ ಪಾವತಿಗಳು ನಿಃಶುಲ್ಕವಾಗುತ್ತವೆ. ಎಂಡಿಆರ್ ಅಂದರೆ ಯುಪಿಐ ಮೂಲಕ ಪಾವತಿಯನ್ನು ಸ್ವೀಕರಿಸುವ ವ್ಯಾಪಾರಿಗಳು ಬ್ಯಾಂಕುಗಳಿಗೆ ಮತ್ತು ಯುಪಿಐ ಸೇವೆಯನ್ನು ಒದಗಿಸುವ ಕಂಪೆನಿಗಳಿಗೆ ಪ್ರತೀ ವಹಿವಾಟಿನ ಮೇಲೆ ಕೊಡುವ ಸೇವಾ ಶುಲ್ಕ. ಈ ಶುಲ್ಕವು ಖರೀದಿಸುವವರ ಬ್ಯಾಂಕಿಗೆ ಶೇ. 40, ವ್ಯಾಪಾರಿಯ ಬ್ಯಾಂಕಿಗೆ ಶೇ. 30, ಯುಪಿಐ ವ್ಯವಸ್ಥೆಯನ್ನು ಒದಗಿಸುವ ಕಂಪೆನಿಗೆ ಶೇ. 20 ಮತ್ತು ಅದರ ಬ್ಯಾಂಕಿಂಗ್ ಪಾಲುದಾರರಿಗೆ ಶೇ. 10ರಂತೆ ಹಂಚಿಕೆಯಾಗುತ್ತದೆ.

2016ರಲ್ಲಿ ಆರಂಭವಾದ ಯುಪಿಐ ಪಾವತಿ ಪದ್ಧತಿಯು ಅದೇ ವರ್ಷ ನವೆಂಬರ್‌ನಲ್ಲಿ ಸರಕಾರವು ಮಾಡಿದ ನೋಟುರದ್ದತಿಯಿಂದಾಗಿ ಜನಪ್ರಿಯವಾಯಿತು. ಸರಕಾರವೂ ನಗದು ವ್ಯವಹಾರದ ಬದಲಾಗಿ ಹಣಕಾಸು ವ್ಯವಸ್ಥೆಯನ್ನು ಡಿಜಿಟಲೀಕರಣಗೊಳಿಸುವ ಉದ್ದೇಶದಿಂದ ಯುಪಿಐ ಮೂಲಕ ಪಾವತಿ ಮಾಡಲು ಜನರನ್ನು ಉತ್ತೇಜಿಸಿತು. ಈ ಪಾವತಿಯು ನಿಃಶುಲ್ಕ; ನಗದನ್ನು ಒಯ್ಯುವ ಕಷ್ಟವಿಲ್ಲ, ಸ್ಮಾರ್ಟ್ ಫೋನ್‌ಗಳ ಮೂಲಕ ತಮ್ಮ ಬ್ಯಾಂಕು ಖಾತೆಯಿಂದ ವ್ಯಾಪಾರಿಯ ಖಾತೆಗೆ ಬಿಲ್ಲಿನಲ್ಲಿ ನಮೂದಿಸಿದ ಹಣವನ್ನು ಕ್ಷಣಾರ್ಧದಲ್ಲಿ ವರ್ಗಾಯಿಸಬಹುದು; ಅಷ್ಟೇ ಅಲ್ಲ ಎರಡು ಪಾರ್ಟಿಗಳಲ್ಲಿಯೂ ಹಣ ಕೊಟ್ಟದ್ದಕ್ಕೆ ಮತ್ತು ಸಿಕ್ಕಿದ್ದಕ್ಕೆ ಬ್ಯಾಂಕು ಖಾತೆಯಲ್ಲಿ ವಹಿವಾಟು ದಾಖಲಾಗುತ್ತದೆ.

ಅದೇ ಸಮಯಕ್ಕೆ ಸರಿಯಾಗಿ ಶೂನ್ಯ ಶಿಲ್ಕು(ಬ್ಯಾಲೆನ್ಸ್) ಇಡಬಹುದಾದ ಜನಧನ್ ಬ್ಯಾಂಕ್ ಅಕೌಂಟುಗಳನ್ನು ತೆರೆಯಲು, ಆ ಖಾತೆಗೆ ಆಧಾರ್ ಕಾರ್ಡನ್ನು ಜೋಡಿಸಿ ಆ ಮೂಲಕ ತಮಗೆ ಸರಕಾರದಿಂದ ಬರಬೇಕಾದ ಧನಸಹಾಯದ ಪಾವತಿ ಮತ್ತು ಇವುಗಳನ್ನೆಲ್ಲ ಸ್ಮಾರ್ಟ್ ಫೋನ್‌ಗಳ ಮೂಲಕ ನಡೆಸಿಕೊಡುವ ಸೌಲಭ್ಯಗಳಿಗೆ ಸರಕಾರ ಬಹಳಷ್ಟು ಉತ್ತೇಜನ ನೀಡಿತು. ಜನಧನ್, ಆಧಾರ್ ಮತ್ತು ಮೊಬೈಲ್ (ಜಾಮ್) ಎಂಬ ತ್ರಿಮೂರ್ತಿಗಳ ಮೂಲಕ ದೇಶದ ಹಣಕಾಸು ವಹಿವಾಟಿನಲ್ಲಿ ಮೂಲಭೂತ ಬದಲಾವಣೆಗಳು ಆದವು. ಯುಪಿಐ ಪದ್ಧತಿಯನ್ನು ಆರಂಭಿಸಿದಾಗ ಅದರ ನಿರ್ವಹಣಾ ವೆಚ್ಚವನ್ನು ಸರಕಾರವೇ ವಹಿಸಿಕೊಂಡಿತು. ಇದರಿಂದಾಗಿ ಗ್ರಾಹಕರ ಮೇಲೆ ಹೊರೆಯೂ ಬೀಳಲಿಲ್ಲ.

2007ರ ಪಾವತಿ ಮತ್ತು ಒಪ್ಪಂದ ವ್ಯವಸ್ಥೆಗಳ ಕಾನೂನು ಅಡಿಯಲ್ಲಿ 2008ರಲ್ಲಿಯೇ ಸ್ಥಾಪಿತವಾಗಿದ್ದ ಭಾರತೀಯ ರಾಷ್ಟ್ರೀಯ ಪಾವತಿ ನಿಗಮ (ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ)ಕ್ಕೆ ದೇಶದಾದ್ಯಂತ ಇಡೀ ಯುಪಿಐ ವ್ಯವಸ್ಥೆಯನ್ನು ನಿಯಂತ್ರಿಸುವ ಅಧಿಕಾರವನ್ನು ನೀಡಲಾಯಿತು.

ವ್ಯಾಪಾರ-ವ್ಯವಹಾರದಲ್ಲಿ ಪಾವತಿಯನ್ನು ಮಾಡಲು ನಗದಿನ ಬದಲಿಗೆ ಪರ್ಯಾಯ ಮಾರ್ಗವನ್ನು ಮಾಹಿತಿ ತಂತ್ರಜ್ಞರು ಕಂಡುಹುಡುಕಿದ್ದು ಸಾವಿರಾರು ವರ್ಷಗಳ ಹಣದ ವಿಕಾಸದ ಇತಿಹಾಸದಲ್ಲಿ ಒಂದು ಪ್ರಮುಖ ಮೈಲುಗಲ್ಲು. ಅದರಿಂದಾಗಿ ಅನೇಕ ದೇಶಗಳ ವ್ಯಾಪಾರ ವಹಿವಾಟುಗಳಿಗೆ ಸಂಬಂಧಪಟ್ಟ ಪಾವತಿವ್ಯವಸ್ಥೆಯು ಅಭೂತಪೂರ್ವ ಬದಲಾವಣೆಗಳನ್ನು ಕಂಡಿತು. ಮಾಹಿತಿ ತಂತ್ರಜ್ಞಾನರಂಗದಲ್ಲಿ ಭಾರತದ ಸಾಧನೆಗೆ ಕಳಶಪ್ರಾಯವಾಗಿ ಯುಪಿಐ ಪಾವತಿ ಪದ್ಧತಿಯು ದೇಶದಾದ್ಯಂತ ಜನಪ್ರಿಯವಾಯಿತು. 2025-26ರ ವಿತ್ತವರ್ಷದಲ್ಲಿ 241.6 ಬಿಲಿಯ ಯುಪಿಐ ವಹಿವಾಟುಗಳಾಗಿದ್ದವು. 550 ಮಿಲಿಯಕ್ಕಿಂತಲೂ ಹೆಚ್ಚು ಮಂದಿ ಅದರ ಮೂಲಕ ಪಾವತಿಯನ್ನು ಮಾಡಿದ್ದರು. ಇದರಿಂದ ಈ ಯುಪಿಐ ಮಾಧ್ಯಮದ ಪಾವತಿಯ ವಿಸ್ತಾರ ಮತ್ತು ಗಾತ್ರವನ್ನು ಅರ್ಥಮಾಡಿಕೊಳ್ಳಬಹುದು.

ಶುಲ್ಕ ವಿಧಿಸುವ ನಿರ್ಧಾರಕ್ಕೆ ಸರಕಾರ ನೀಡಿದ ಕಾರಣಗಳು ಹೀಗಿವೆ: ಯುಪಿಐ ವ್ಯವಸ್ಥೆಯನ್ನು ನಿರ್ವಹಿಸಲು ವೆಚ್ಚವಿದೆ. ಯಾವುದೇ ಸೌಲಭ್ಯವನ್ನು ನಾಗರಿಕರಿಗೆ ಉಚಿತವಾಗಿ ಅನಿರ್ದಿಷ್ಟಕಾಲದ ವರೆಗೆ ನೀಡಬಾರದು. ವಿದೇಶಗಳಲ್ಲಿಯೂ ಈ ರೀತಿಯ ಸೌಕರ್ಯವನ್ನು ಒದಗಿಸುವ ಸಂಸ್ಥೆಗಳು ಗ್ರಾಹಕರಿಂದ ಸೇವಾ ಶುಲ್ಕವನ್ನು ವಸೂಲಿಮಾಡುತ್ತವೆ. ಡಿಜಿಟಲ್ ಪಾವತಿಯು ಹೆಚ್ಚಾದಂತೆ ಸಾಮಾನ್ಯ ಹಾಗೂ ಸೈಬರ್ ವಂಚನೆಗಳು ಹೆಚ್ಚುತ್ತಿವೆ. ಅವುಗಳಿಗೆ ಕಡಿವಾಣ ಹಾಕಲು ಇನ್ನೂ ಕಟ್ಟುನಿಟ್ಟಾದ ಭದ್ರತಾ ಕ್ರಮಗಳನ್ನು ಅಳವಡಿಸಿಕೊಳ್ಳಬೇಕಾಗುತ್ತದೆ. ಇದಕ್ಕೆ ವೆಚ್ಚವಾಗುತ್ತದೆ. ಆರ್‌ಬಿಐಯ ಗವರ್ನರ್ ಸಂಜಯ ಮಲ್ಹೋತ್ರ ಇತ್ತೀಚೆಗೆ ಹೇಳಿದ್ದರು: ಇವುಗಳಿಗೆಲ್ಲ ಆಗುವ ವೆಚ್ಚವನ್ನು ಯಾರಾದರೂ ಭರಿಸಲೇ ಬೇಕಾಗುತ್ತದೆ.

ಸರಕಾರದ ಪ್ರಕಾರ ಬಹುತೇಕ ವಹಿವಾಟುಗಳು ರೂ. 2,000ದ ಒಳಗೆ ಇವೆ; ಹೀಗಾಗಿ ಜನಸಾಮಾನ್ಯರಿಗೆ ಇದರಿಂದ ಹೊರೆಯಾಗುವುದಿಲ್ಲ. ಅದರಿಂದ ಹೆಚ್ಚಿನ ವಹಿವಾಟುಗಳನ್ನು ಮಾಡುವವರು ಆರ್ಥಿಕವಾಗಿ ಮೇಲ್ವರ್ಗದವರು. ಮಾತ್ರವಲ್ಲ ರೂ. 2,000ದ ಮೇಲಿನ ವಹಿವಾಟಿಗೆ ಶುಲ್ಕವನ್ನು ವಿಧಿಸಿದರೂ ಅದನ್ನು ಗ್ರಾಹಕರ ಮೇಲೆ ವರ್ಗಾಯಿಸುವಂತಿಲ್ಲ ಎಂದು ಸರಕಾರ ಹೇಳಿಕೊಂಡಿದೆ.

ಸ್ವಾಭಾವಿಕವಾಗಿಯೇ ಇದಕ್ಕೆ ವಿರುದ್ಧವಾದ ಟೀಕೆಗಳು ರಾಜಕೀಯ ಮತ್ತು ಇತರ ವಲಯಗಳಿಂದ ಬಂದಿವೆ. ಅವುಗಳಲ್ಲಿ ಮೂರು ಚಿಂತನೆಗೆ ಗ್ರಾಸವಾಗುತ್ತವೆ.

ಒಂದು, ನೀವು ಖರೀದಿಸಿದ ಸರಕಿನ ಮೇಲೆ ಜಿಎಸ್‌ಟಿ ನೀಡುವುದಲ್ಲದೆ, ಪಾವತಿಯ ಮೇಲೆಯೂ ಶುಲ್ಕ ನೀಡುವುದು ಸರಿಯೇ? ಇದು ಸೇವಾಶುಲ್ಕವೆಂದಾದರೆ ಅದರ ಮೇಲೆಯೂ ಜಿಎಸ್‌ಟಿ ಕೊಡಬೇಕಾಗದೇ? ಎರಡು, ಭಾರತದಲ್ಲಿ ಯುಪಿಐ ಸೇವೆಯನ್ನು ಒದಗಿಸುವ ಅತಿ ದೊಡ್ಡ ಎರಡು ಕಂಪೆನಿಗಳು ಫೋನ್ ಪೇ ಮತ್ತು ಗೂಗಲ್ ಪೇ. ಇವುಗಳು ಅನುಕ್ರಮವಾಗಿ ಅಮೆರಿಕದ ಕಾರ್ಪೊರೇಟ್ ದಿಗ್ಗಜಗಳಾದ ವಾಲ್ ಮಾರ್ಟ್ ಮತ್ತು ಗೂಗಲ್ ಕಾರ್ಪೊರೇಶನ್‌ಗಳ ಸಹಸಂಸ್ಥೆಗಳು. ಅಮೆರಿಕದಲ್ಲಿ ಡಿಜಿಟಲ್ ವಹಿವಾಟಿಗೆ ಶುಲ್ಕ ವಿಧಿಸುವಾಗ ನಮ್ಮ ದೇಶದಲ್ಲಿ ನಿಃಶುಲ್ಕ ಮಾಡಬಾರದೆಂದು ಅಮೆರಿಕ ಸರಕಾರದ ವಾಣಿಜ್ಯ ಪ್ರತಿನಿಧಿಯ ಹೇಳಿದ್ದರೆಂಬ ವರದಿಗಳು ಇವೆ. ಹಾಗಿದ್ದರೆ ಈ ನಿರ್ಧಾರಕ್ಕೆ ಬಾಹ್ಯ ಆರ್ಥಿಕ ಶಕ್ತಿಗಳ ಒತ್ತಡವಿರಬಹುದೇ?

ಮೂರು, 2,000 ರೂ. ಮೇಲಿನ ವಹಿವಾಟಿಗೆ ವಿಧಿಸುವ ಶುಲ್ಕವನ್ನು ಗ್ರಾಹಕರಿಗೆ ವರ್ಗಾಯಿಸುವಂತಿಲ್ಲ ಎಂದು ಸರಕಾರ ಹೇಳಿದೆ. ಆದರೆ ಇದು ಸಾಧ್ಯವೇ? ವ್ಯಾಪಾರಿಯು ಯಾವತ್ತೂ ತನ್ನ ವೆಚ್ಚವನ್ನು ಕಡಿಮೆಮಾಡುವ ದಾರಿಯನ್ನು ಶೋಧಿಸುತ್ತಾನೆ.

ಈ ಬೆಳವಣಿಗೆಯ ಇನ್ನೊಂದು ಅಡ್ಡ ಪರಿಣಾಮವನ್ನು ಅಲ್ಲಗಳೆಯುವಂತಿಲ್ಲ. ಜನಸಾಮಾನ್ಯರ ದೃಷ್ಟಿಯಲ್ಲಿ ಕರೆನ್ಸಿ ಇಂದಿಗೂ ಭದ್ರತೆಯ ಸಂಕೇತ. ಈ ಕಾರಣದಿಂದಾಗಿ 2016ರ ನೋಟುರದ್ದತಿಯ ಬಳಿಕವೂ ಕರೆನ್ಸಿಯ ಚಲಾವಣೆ ಅನೇಕ ಪಟ್ಟು ಹೆಚ್ಚಿದೆ. ಈಗ ಯುಪಿಐ ವಹಿವಾಟಿನ ಮೇಲೆ ಶುಲ್ಕ ವಿಧಿಸಿದರೆ ಯುಪಿಐಯನ್ನು ಬಳಸುವ ಬದಲು ಜನಸಾಮಾನ್ಯರು ಮತ್ತು ಕಿರು ಉದ್ದಿಮೆಗಳು ಮತ್ತೆ ನಗದು ವ್ಯವಹಾರಕ್ಕೆ ಮೊರೆಹೋಗಬಹುದು. ಇದರಿಂದಾಗಿ ನಗದುರಹಿತ ಅರ್ಥವ್ಯವಸ್ಥೆಗೆ ಹಿನ್ನಡೆ ಆಗಬಹುದು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಕರಾವಳಿ ಕಾಂಗ್ರೆಸ್‌ಗೆ ಬೂಸ್ಟ್ ನೀಡಿದ ಸಚಿವ ಸಂಪುಟ ಸಭೆ: ರಾಜಕೀಯ ಲಾಭ ಸಿಗುತ್ತಾ?

ಕೇವಲ ಯೋಜನೆಗಳ ಘೋಷಣೆಯಾದರೆ ಸಾಲದು; ಅನುದಾನ ಬಿಡುಗಡೆಯಾಗಬೇಕು, ಟೆಂಡರ್ ಪ್ರಕ್ರಿಯೆ ಮುಗಿದು ಕಾಮಗಾರಿಗಳು ನೆಲಮಟ್ಟದಲ್ಲಿ ಆರಂಭವಾಗಬೇಕು. ಕೆಲಸ ವಿಳಂಬವಾದರೆ ಜನರಲ್ಲಿ ನಿರಾಸೆ ಮೂಡುವುದು ಖಂಡಿತ. ಈ ರಾಜಕೀಯ ಲಾಭವು ಚುನಾವಣೆಯಲ್ಲಿ ಮತಗಳಾಗಿ ಬದಲಾಗಬೇಕಾದರೆ, ಯೋಜನೆಗಳು ನಿಗದಿತ ಸಮಯದೊಳಗೆ ಕಾರ್ಯರೂಪಕ್ಕೆ ಬರಬೇಕಾದುದು ಅತ್ಯಗತ್ಯ ಅಂತಾರೆ ಮುಖಂಡರು

ಕರಾವಳಿ ಕರ್ನಾಟಕ (ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳು) ದಶಕಗಳಿಂದಲೂ ಬಿಜೆಪಿಯ ಭದ್ರಕೋಟೆಯೆಂದೇ ಗುರುತಿಸಿಕೊಂಡಿದೆ. ಹಿಂದುತ್ವದ ಅಲೆ ಮತ್ತು ಭಾವನಾತ್ಮಕ ವಿಷಯಗಳೇ ಇಲ್ಲಿ ಪ್ರಮುಖ ರಾಜಕೀಯ ವೇದಿಕೆಯನ್ನಾಗಿಸಿ ಬಿಜೆಪಿ ಜಯಿಸುತ್ತಾ ಬಂದಿದೆ. ಆದರೆ, ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಮಂಗಳೂರಿನ ಪ್ರಜಾ ಸೌಧದಲ್ಲಿ ಸಚಿವ ಸಂಪುಟ ಸಭೆಯನ್ನು ನಡೆಸಿ, ಒಟ್ಟು ₹32,611 ಕೋಟಿ ವೆಚ್ಚದ ಬೃಹತ್ ಯೋಜನೆಗಳು ಮತ್ತು ಸುದೀರ್ಘ ದಿನಗಳ ಬೇಡಿಕೆಗಳಿಗೆ ಅನುಮೋದನೆ ನೀಡುವ ಮೂಲಕ ಹೊಸ ಸಂಚಲನ ಮೂಡಿಸಿದೆ.



ಯೋಜನೆಗಳ ಪ್ರಕಟಣೆ ಮತ್ತು ಸಾಂಸ್ಕೃತಿಕ ನಿರ್ಧಾರಗಳು ಕರಾವಳಿಯ ರಾಜಕೀಯ ಸಮೀಕರಣಗಳ ಮೇಲೆ ಬೀರಬಹುದಾದ ಪರಿಣಾಮಗಳು ಪ್ರಸ್ತುತ ವ್ಯಾಪಕ ಚರ್ಚೆಗೆ ಗ್ರಾಸವಾಗಿವೆ. ದಶಕಗಳಿಂದಲೂ ಬಿಜೆಪಿಯ ಗಟ್ಟಿಯಾದ ಭದ್ರಕೋಟೆಯಾಗಿರುವ ಕರಾವಳಿ ಭಾಗದಲ್ಲಿ, ಭಾವನಾತ್ಮಕ ವಿಷಯಗಳ ಬದಲಿಗೆ ಪ್ರತ್ಯಕ್ಷ ಅಭಿವೃದ್ಧಿ ಹಾಗೂ ಪ್ರಾದೇಶಿಕ ಗುರುತಿನ ಪ್ರತಿಪಾದನೆಯ ಮೂಲಕ ತಳವೂರಲು ಕಾಂಗ್ರೆಸ್ ತಾಂತ್ರಿಕವಾಗಿ ತಂತ್ರ ಹೆಣೆದಿದೆ. ಈ ಅನುದಾನದ ಮಹಾಮಳೆ ಮತ್ತು ತೀರ್ಮಾನಗಳು ಕೇವಲ ಸರ್ಕಾರಿ ಘೋಷಣೆಗಳಾಗಷ್ಟೇ ಉಳಿಯದೆ ಕಾಲಮಿತಿಯಲ್ಲಿ ಜಾರಿಯಾದರೆ, ಅದು ಕರಾವಳಿಯಲ್ಲಿ ಕಾಂಗ್ರೆಸ್‌ಗೆ ರಾಜಕೀಯವಾಗಿ ಭಾರಿ ಅನುಕೂಲವನ್ನು ಮಾಡಿಕೊಡುವ ಸಾಧ್ಯತೆಯನ್ನು ನಿರಾಕರಿಸಲಾಗುವುದಿಲ್ಲ.

ಮೊದಲನೆಯದಾಗಿ ಕರಾವಳಿ ಜನರ ದಶಕಗಳ ಬೇಡಿಕೆಯಾಗಿದ್ದ ತುಳು ಭಾಷೆಗೆ ಅಧಿಕೃತ ರಾಜ್ಯ ಭಾಷೆಯ ಮಾನ್ಯತೆಯನ್ನು ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ನೀಡಲು ಸಂಪುಟ ಸಮ್ಮತಿಸಿದೆ. ಬಿಜೆಪಿಯು ಇಷ್ಟು ವರ್ಷ ಕರಾವಳಿಯಲ್ಲಿ ಅಧಿಕಾರದಲ್ಲಿದ್ದಾಗಲೂ ಈ ಬೇಡಿಕೆಯನ್ನು ಈಡೇರಿಸಿರಲಿಲ್ಲ ಎಂಬ ವಾದವನ್ನು ಈಗ ಕಾಂಗ್ರೆಸ್ ಜನರೆದುರು ಮಂಡಿಸಬಹುದು. ಈ ಮೂಲಕ ಕರಾವಳಿಯ ಸಾಂಸ್ಕೃತಿಕ ಹಾಗೂ ಆವೇಗತ್ಮಕ ಭಾವನೆಗಳಿಗೆ ಧ್ವನಿಯಾಗುವ ಮೂಲಕ ಕಾಂಗ್ರೆಸ್ ಇಲ್ಲಿನ ಕನ್ನಡಿಗರು ಮತ್ತು ತುಳುವರ ಮನೆಗೆ ಹತ್ತಿರವಾಗಲು ಯತ್ನಿಸಿದೆ.

ಇನ್ನೊಂದೆಡೆ ಮಂಗಳೂರು ನಗರದ ಹಾನಿಗೊಳಗಾದ ರಸ್ತೆಗಳ ಕಾಂಕ್ರೀಟೀಕರಣಕ್ಕೆ ₹400 ಕೋಟಿ, ಯುಜಿಡಿ (ಅಂಡರ್‌ಗ್ರೌಂಡ್ ಡ್ರೈನೇಜ್) ಸುಧಾರಣೆಗೆ ₹100 ಕೋಟಿ, ವಾಟರ್ ಮೆಟ್ರೋ ಯೋಜನೆಯ ತಾಂತ್ರಿಕ ಅಧ್ಯಯನ, ವೆನ್‌ಲಾಕ್ ಆಸ್ಪತ್ರೆಯ ಸಾಮರ್ಥ್ಯವನ್ನು 200 ಬೆಡ್‌ಗಳಿಗೆ ಹೆಚ್ಚಿಸಿ ಮೇಲ್ದರ್ಜೆಗೇರಿಸುವುದು, ಪುತ್ತೂರಿನಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ₹549 ಕೋಟಿ ಹಾಗೂ ಮಂಗಳಾ ಸ್ಟೇಡಿಯಂ ಮತ್ತು ಉಡುಪಿ ಕ್ರೀಡಾಂಗಣದ ಅಭಿವೃದ್ಧಿಗೆ ವಿಶೇಷ ಅನುದಾನಗಳನ್ನು ಪ್ರಕಟಿಸಲಾಗಿದೆ. ''ನಾವು ಕೇವಲ ಭಾವನೆಗಳ ಮೇಲೆ ರಾಜಕೀಯ ಮಾಡುವುದಿಲ್ಲ, ಜನರ ಬದುಕು ಮತ್ತು ಅಭಿವೃದ್ಧಿಯ ಮೇಲೆ ಕೆಲಸ ಮಾಡುತ್ತೇವೆ'' ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿರುವಂತೆ ಮೂಲಸೌಕರ್ಯ ಕೊರತೆಯಿಂದ ಕಂಗಾಲಾಗಿದ್ದ ಮಂಗಳೂರು ನಗರ ಮತ್ತು ಗ್ರಾಮೀಣ ಭಾಗದ ಜನರಿಗೆ ಈ ಯೋಜನೆಗಳು ಕೊಂಚ ಸಮಾಧಾನ ತರಬಹುದು. ಹಾಗೆಯೇ ಮೀನುಗಾರ ಸಮುದಾಯವು ಕರಾವಳಿಯ ಬಹುದೊಡ್ಡ ವೋಟ್ ಬ್ಯಾಂಕ್. ಅವರ ಸಾಲ, ಭದ್ರತೆ ಮತ್ತು ಆಧುನಿಕ ಮೂಲಸೌಕರ್ಯಗಳ ಕುರಿತು ಕೈಗೊಂಡ ನಿರ್ಧಾರಗಳು ಕಾಂಗ್ರೆಸ್ ಪಕ್ಷಕ್ಕೆ ನೆರವಾಗುವ ಸಾಧ್ಯತೆಯಿದೆ.

ಈ ಬಗ್ಗೆ ಈ ದಿನ.ಕಾಮ್‌ಗೆ ಪ್ರತಿಕ್ರಿಯಿಸಿದ ದಕ್ಷಿಣ ಕನ್ನಡದ ಬಂಟ್ವಾಳ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ, ಮಾಜಿ ಸಚಿವ ರಮಾನಾಥ ರೈ, ''ನಮಗೆ ರಾಜಕೀಯ ಅನುಕೂಲವಾಗಬಹುದು. ಆದರೆ ರಾಜಕೀಯ ಅನುಕೂಲವಾಗುವುದಕ್ಕೂ ಹೆಚ್ಚಾಗಿ ನಾವು ಅಭಿವೃದ್ಧಿ ಪರವಾಗಿ ಕೆಲಸ ಮಾಡುವವರು. ಕೆಲವರಿಗೆ ಚುನಾವಣೆಯೇ ಅಜೆಂಡಾ, ಆದರೆ ನಮಗೆ ಅಭಿವೃದ್ಧಿ ಕಾರ್ಯ ಮಾಡುವುದೇ ಅಜೆಂಡಾ. ಲಾಭವಾಗುತ್ತದೊ ಬಿಡುತ್ತದೋ ಬೇರೆ ವಿಚಾರ. ಆದರೆ ಜನರಿಗೆ ಅನುಕೂಲವಾಗುವುದು ಮುಖ್ಯ, ಅದು ಆಗಿದೆ'' ಎಂದು ಅಭಿಪ್ರಾಯಿಸಿದರು.

ದಕ್ಷಿಣ ಕನ್ನಡದ ಬಂಟ್ವಾಳ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ, ಮಾಜಿ ಸಚಿವ ರಮಾನಾಥ ರೈ

''ಕರಾವಳಿಯಲ್ಲಿ ಪ್ರವಾಸೋದ್ಯಮ ಬೆಳವಣಿಗೆ, ಮೀನುಗಾರಿಕೆ ಅಭಿವೃದ್ಧಿಗೆ, ತುಳು ಭಾಷೆ ಸಂಬಂಧಿತ ಘೋಷಣೆ ಮಾಡಲಾಗಿದೆ. ನಾವು ಈವರೆಗೆ ಮಂಗಳೂರಿನ ಬೆಳವಣಿಗೆಯನ್ನು ಹತ್ತಿರದಿಂದ ನೋಡಿದಾಗ ಕಾಂಗ್ರೆಸ್‌ನ ಶ್ರೀನಿವಾಸ್ ಮಲ್ಯ ಅವರು ಕೊಟ್ಟಿರುವ ಕೊಡುಗೆ ಅಭೂತಪೂರ್ವ. ಸೇತುವೆ, ರೈಲ್ವೆ, ವಿಮಾನ ನಿಲ್ದಾಣ, ಬಂದರು ಎಲ್ಲವೂ ಕಾಂಗ್ರೆಸ್ ಅವಧಿಯಲ್ಲಿ ಮಾಡಲಾಗಿದೆಯೇ ಹೊರತು ಬೇರೆ ಯಾರ ಅವಧಿಯಲ್ಲೂ ಅಲ್ಲ. ಆಸ್ಕರ್ ಫರ್ನಾಂಡಿಸ್ ಅವರು ಇದ್ದಾಗ ಹಲವಾರು ಅಭಿವೃದ್ಧಿ ಕಾರ್ಯ ಆಗಿದೆ. ಮಂಗಳೂರಿಗೆ ಇತರೆ ಜಿಲ್ಲೆ ಕೊಂಡಿಯಾಗಲು ಹೆದ್ದಾರಿಗಳನ್ನೂ ಮಾಡಿಸಿದವರು ಅವರು. ಆ ಸಂದರ್ಭದಲ್ಲಿ ಅವರು ಯಾರೂ ಪ್ರಚಾರ ಮಾಡಿಲ್ಲ. ಇವೆಲ್ಲವೂ ಅಂಕಿಅಂಶ ಆಧಾರದಲ್ಲಿ ನಾನು ಮಾತನಾಡುತ್ತಿರುವುದು'' ಎಂದರು.

''ನಮ್ಮ ಜಿಲ್ಲೆಯಲ್ಲಿ ಪ್ರಜಾಸೌಧ ಮಾಡಲಾಗಿದೆ. ಬೆಂಗಳೂರು ಬಿಟ್ಟರೆ ಅತಿ ದೊಡ್ಡ ಅಂಬೇಡ್ಕರ್ ಭವನ ಇರುವುದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ. ನಾವೀಗ ಇಲ್ಲಿ ಶಾಸಕ ಸ್ಥಾನ ಸೋತಿರಬಹುದು. ಆದರೆ ಇಲ್ಲಿನ ಅಭಿವೃದ್ಧಿ ವಿಚಾರದಲ್ಲಿ ನಮ್ಮ ಸರ್ಕಾರ ಹಿಂದೇಟು ಹಾಕಿಲ್ಲ. ಕಾಟಾಚಾರಕ್ಕಾಗಿ ನಾವು ಸಚಿವ ಸಂಪುಟ ಸಭೆ ಮಾಡಿರುವುದಲ್ಲ, ಜನರ ಅನುಕೂಲಕ್ಕಾಗಿ ಮಾಡಿರುವುದು. ಕೆಲವು ಬೇಡಿಕೆಗಳು ಬಿಟ್ಟು ಹೋಗಿದೆ. ಆ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದೆ'' ಎಂದು ತಿಳಿಸಿದರು.

ಮಂಗಳೂರಿನ ಪ್ರಮುಖ ರಾಜಕೀಯ ಮತ್ತು ಸಾಮಾಜಿಕ ಚಿಂತಕರು, ಕಾಂಗ್ರೆಸ್ ವಕ್ತಾರ ಎಂ.ಜಿ. ಹೆಗಡೆ ಅವರು ಪ್ರತಿಕ್ರಿಯಿಸಿದ್ದು, ''ಇಲ್ಲಿಯವರೆಗೆ ಅಭಿವೃದ್ಧಿಯ ಚರ್ಚೆಯನ್ನೇ ಮಾಡಲು ಬಿಜೆಪಿಗರು ಮುಂದಾಗಿರಲಿಲ್ಲ, ಭಾವನಾತ್ಮಕ ಸಂಗತಿಗಳನ್ನು ಮಾತ್ರ ಕೆರಳಿಸುತ್ತಿದ್ದರು. ಚುನಾವಣೆಯಲ್ಲಿ ವಿಷಯವಲ್ಲದನ್ನೂ ವಿಷಯವನ್ನಾಗಿಸುವ ವಾತಾವರಣ ನಿರ್ಮಿಸಿದ್ದರು. ಈಗ ನೇರವಾಗಿ ಮುಖ್ಯಮಂತ್ರಿಗಳು ಕರಾವಳಿಗೆ ಬಂದು ಸಚಿವ ಸಂಪುಟ ಸಭೆ ಮಾಡಿದ್ದಾರೆ. ಇಲ್ಲಿ ಹೊಸ ಅಲೆಯನ್ನು ಸೃಷ್ಟಿಸಿದ್ದಾರೆ. ಈಗ ಅಭಿವೃದ್ಧಿಯ ಚರ್ಚೆ ಆರಂಭವಾಗಿದೆ. ಇದರಿಂದಾಗಿ ಚುನಾವಣೆಯ ವಿಚಾರ ಬಂದಾಗ ಜನರ ಮನಸ್ಸು ಸ್ವಲ್ಪ ಕಾಂಗ್ರೆಸ್ ಕಡೆ ಹೊರಳುತ್ತದೆ'' ಎಂದು ಅಭಿಪ್ರಾಯಿಸಿದರು.

ರಾಜಕೀಯ ಮತ್ತು ಸಾಮಾಜಿಕ ಚಿಂತಕರು, ಕಾಂಗ್ರೆಸ್ ವಕ್ತಾರ ಎಂ.ಜಿ. ಹೆಗಡೆ

''ಅಭಿವೃದ್ಧಿಯ ವಿಚಾರದಲ್ಲಿ ಚರ್ಚೆಯಾದರೆ ಅದು ಯಾವತ್ತೂ ಕಾಂಗ್ರೆಸ್‌ಗೆ ಲಾಭ. ಏಕೆಂದರೆ ಬಿಜೆಪಿಗರ ಬಳಿ ಅಭಿವೃದ್ಧಿ ವಿಚಾರದಲ್ಲಿ ಹೇಳಿಕೊಳ್ಳಲು ಏನೂ ಇಲ್ಲ. ಅದಕ್ಕಾಗಿ ಭಾವನಾತ್ಮಕ ಸಂಗತಿಯನ್ನೇ ಕೆರಳಿಸುತ್ತಾರೆ. ಆದ್ದರಿಂದ ಯೋಜನೆಗಳು, ತುಳು ಭಾಷೆಗೆ ಮಾನ್ಯತೆ ಕಾಂಗ್ರೆಸ್‌ಗೆ ಅನುಕೂಲವಾಗಲಿದೆ. ಬಿಜೆಪಿಯ ಭಾವನಾತ್ಮಕ ರಾಜಕಾರಣಕ್ಕೆ ಹಿನ್ನಡೆ ಉಂಟಾಗಲಿದೆ'' ಎಂದು ತಿಳಿಸಿದರು.

ಮಹಿಳಾ ಕಾಂಗ್ರೆಸ್ ಮುಖಂಡೆ ಪ್ರತಿಭಾ ಕುಳಾಯಿ ಪ್ರತಿಕ್ರಿಯಿಸಿ, ''ಖಂಡಿತವಾಗಿಯೂ ಕಾಂಗ್ರೆಸ್‌ಗೆ ಅನುಕೂಲವಾಗಲಿದೆ. ಯಾಕೆಂದರೆ ಇಲ್ಲಿಯವರೆಗೆ ನಮ್ಮ ಸ್ವತ್ತುಗಳನ್ನು ಬೇರೆ ಬೇರೆ ಕಂಪನಿಗಳಿಗೆ ಮಾರಾಟ ಮಾಡಿದ್ದೇವೆ. ಎಂಆರ್‌ಪಿಎಲ್ ಸೇರಿದಂತೆ ಹಲವು ಸಂಸ್ಥೆಗಳು ನಮ್ಮವರಿಗೆ ಉದ್ಯೋಗ ನೀಡಿಲ್ಲ. ಶಿಕ್ಷಿತರಾದರೂ ಉದ್ಯೋಗವಿಲ್ಲ. ಈಗ ಉದ್ಯೋಗಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ'' ಎಂದು ತಿಳಿಸಿದರು.

ಮಹಿಳಾ ಕಾಂಗ್ರೆಸ್ ಮುಖಂಡೆ ಪ್ರತಿಭಾ ಕುಳಾಯಿ

''ನಮ್ಮಲ್ಲಿ ಶಿಕ್ಷಿತರಿದ್ದಾರೆ, ವಿಮಾನ ನಿಲ್ದಾಣ, ಇತರೆ ಸೌಲಭ್ಯಗಳಿದೆ. ಅವೆಲ್ಲವೂ ಉಳ್ಳಾಲ ಶ್ರೀನಿವಾಸ ಮಲ್ಯ ಅವಧಿಯಲ್ಲಿ ಆಗಿರುವಂತದ್ದು. ಅದಾದ ಬಳಿಕ ಏನೂ ಆಗಿಲ್ಲ. ಅಭಿವೃದ್ಧಿ ಎಂಬುದಿಲ್ಲ. ಆದರೆ ಈಗ ಪ್ರವಾಸೋದ್ಯಮಕ್ಕೆ ಸರ್ಕಾರ ಆದ್ಯತೆ ನೀಡಿದೆ. ಇದರಿಂದಾಗಿ ಉದ್ಯೋಗವಕಾಶವಿದೆ. ಇದರಿಂದ ಸ್ಥಳೀಯರಿಗೆ ಸಹಾಯವಾಗಲಿದೆ ಎಂಬುದು ನನ್ನ ಅಭಿಪ್ರಾಯ'' ಎಂದರು.

''ನಮ್ಮ ಜಿಲ್ಲೆಯಲ್ಲಿ ಎಲ್ಲ ಸೌಲಭ್ಯವಿದ್ದರೂ ಇಲ್ಲಿ ಯಾವುದೇ ಸಂಸ್ಥೆಗಳು ಹೂಡಿಕೆ ಮಾಡದಿರಲು ಕೋಮು ಗಲಭೆ ಕಾರಣ. ಹಿಂದೂ ಮುಸ್ಲಿಂ ಎಂದು ಗಲಾಟೆ ಮಾಡುತ್ತಿರುವಾಗ ಯಾರೂ ಇಲ್ಲಿಗೆ ಬರಲು ಮುಂದಾಗಲ್ಲ. ಇತ್ತೀಚೆಗೆ ಶಿಕ್ಷಣಕ್ಕಾಗಿ ಇಲ್ಲಿಗೆ ಮಕ್ಕಳನ್ನು ಕಳುಹಿಸಲೂ ಪೋಷಕರು ಹೆದರುತ್ತಿದ್ದಾರೆ. ಕೋಮು ಗಲಭೆಯನ್ನು ಬದಿಗಿಟ್ಟರೆ ಮಂಗಳೂರು ರಾಜ್ಯದಲ್ಲಿ ಒಂದನೇ ಸ್ಥಾನದಲ್ಲಿರಲಿದೆ'' ಎಂದು ತಿಳಿಸಿದರು.

''ನಮ್ಮ ಸರ್ಕಾರ ತುಳು ಭಾಷೆಗೆ ಅಧಿಕೃತ ಮಾನ್ಯತೆ ಘೋಷಿಸಿದೆ. ಆದರೆ ಬಿಜೆಪಿಗರು ತಮ್ಮ ಶಾಸಕರಿಗೆ ಅಭಿನಂದನೆ ತಿಳಿಸುತ್ತಿದ್ದಾರೆ. ಆದರೆ ಇದರಲ್ಲಿ ಏನು ಅರ್ಥ ಇದೆ ಗೊತ್ತಾಗುತ್ತಿಲ್ಲ. ಅವರ ಸರ್ಕಾರವಿದ್ದಾಗ ಈ ಕಾರ್ಯವನ್ನು ಮಾಡಿಲ್ಲ. ಈಗ ನಮ್ಮ ಸರ್ಕಾರ ತುಳುವಿಗೆ ಮಾನ್ಯತೆ ನೀಡಿದೆ ಎಂದು ವಾಗ್ದಾಳಿ ನಡೆಸಿದರು.

ಇನ್ನು ಉಡುಪಿ ಜಿಲ್ಲೆಯ ಬೈಂದೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿರುವ ಡಾ. ಸುಬ್ರಹ್ಮಣ್ಯ ಭಟ್ ಅವರು ಪ್ರತಿಕ್ರಿಯಿಸಿದ್ದು ಹೀಗೆ ''ಅನುದಾನ ಬಿಡುಗಡೆಯಾದ ಕಾರಣ ಕಾಂಗ್ರೆಸ್‌ಗೆ ಲಾಭವಾಗಲಿದೆ ಎಂದು ಹೇಳಲಾಗದು. ಆದರೆ ಸಿಎಂ ಆದ ಡಿ ಕೆ ಶಿವಕುಮಾರ್ ಅವರಿಗೆ ಕೊಂಚ ಮೃದು ಹಿಂದುತ್ವ ಇರುವ ಕಾರಣ, ಇಲ್ಲಿಯೂ ಹಿಂದುತ್ವ ಬಲ ಇರುವುದರಿಂದ ಕಾಂಗ್ರೆಸ್‌ಗೆ ಕೊಂಚ ರಾಜಕೀಯ ಲಾಭವಾಗಬಹುದು. ಹಾಗೆಂದು ಬಿಜೆಪಿ ಕಾರ್ಯಕರ್ತರು ಬದಲಾಗಲಾರರು. ತಟಸ್ಥ ಇರುವವರು, ಕಾಂಗ್ರೆಸ್‌ಗಿಂತ ಶಿವಕುಮಾರ್ ಸರ್ಕಾರದ ಕಡೆ ವಾಲಬಹುದು'' ಎಂದರು.

ಉಡುಪಿ ಜಿಲ್ಲೆಯ ಬೈಂದೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿರುವ ಡಾ. ಸುಬ್ರಹ್ಮಣ್ಯ ಭಟ್

''ಕಸ್ತೂರಿರಂಗನ್ ವಿಚಾರದಲ್ಲಿ ಭರವಸೆ ಮೂಡಿಸಿದಾಗ ಮುಂದಿನ ದಿನಗಳಲ್ಲಿ ಮತ ಹಾಕುವ ಎಂಬ ಆಲೋಚನೆ ಜನರಲ್ಲಿ ಮೂಡಬಹುದು. ಮುಂದಿನ 2028ರ ವಿಧಾನಸಭೆ ಚುನಾವಣೆಗೆ ಲಾಭವಾಗಬಹುದು. ದಕ್ಷಿಣ ಕನ್ನಡ, ಉಡುಪಿಯಲ್ಲಿ ಬದಲಾವಣೆಯಾಗಬಹುದು. ನಿಧಾನವಾಗಿ ಬದಲಾವಣೆ ಆಗಬಹುದು, ಆದರೆ ನೇರವಾಗಿ ಬದಲಾವಣೆ ಆಗದು. ಚುನಾವಣೆಗೂ ಒಂದು ವರ್ಷಕ್ಕೂ ಮುನ್ನ ಎಲ್ಲವೂ ತಿಳಿಯುತ್ತದೆ'' ಎಂದು ಅಭಿಪ್ರಾಯಿಸಿದರು.

''ತುಳು ವಿಚಾರದಲ್ಲಿ ಕೊಂಚ ಬದಲಾವಣೆಯಾಗಬಹುದು. ಇದರಿಂದಾಗಿ ಹೆಚ್ಚಿನ ಪ್ರಭಾವ ಆಗದು. ಮಂಗಳೂರಿನಲ್ಲಷ್ಟೇ ಬದಲಾವಣೆ ಆಗಬಹುದು. ವಿ. ಸುನಿಲ್ ಕುಮಾರ್ ಅವರು ಕನ್ನಡ ಮತ್ತು ಸಂಸ್ಕೃತಿ ಸಚಿವರಾಗಿದ್ದರು. ಈ ವೇಳೆ ತುಳುವನ್ನು ಎರಡನೇ ಅಧಿಕೃತ ಭಾಷೆಯನ್ನಾಗಿ ಮಾಡಬಹುದಿತ್ತು. ಆದರೆ ಮಾಡಿಲ್ಲ. ಈಗ ಕಾಂಗ್ರೆಸ್ ಸರ್ಕಾರದಲ್ಲಿ ಘೋಷಣೆಯಾಗಿದೆ. ಆದರೆ ಇದು ನಮ್ಮಿಂದಲೇ ಸಾಧ್ಯವಾಗಿದ್ದು ಎಂದು ಸುನಿಲ್ ಕುಮಾರ್ ಅವರು ಹೇಳಿಕೊಳ್ಳಬಹುದು'' ಎಂದು ತಿಳಿಸಿದರು.

ಉಡುಪಿಯ ಪ್ರಮುಖ ಕಾಂಗ್ರೆಸ್ ಮುಖಂಡ ಅಮೃತ್ ಶೆಣೈ, ''ಸರ್ಕಾರದ ಪಂಚ ಯೋಜನೆಗಳ ಅಪಾರ ಪ್ರಮಾಣದ ಫಲಾನುಭವಿಗಳು ದಕ್ಷಿಣ ಕನ್ನಡ ಜಿಲ್ಲೆಯವರಾಗಿದ್ದಾರೆ. ನಮಗೆ ಈ ಜಿಲ್ಲೆಯಲ್ಲಿ ಮತ ಹಾಕಿಲ್ಲ, ಯಾವುದೇ ಸ್ಥಾನ ನೀಡಿಲ್ಲ ಎಂಬ ಕಾರಣಕ್ಕೆ ಈ ಜಿಲ್ಲೆಗೆ ಯಾವುದೇ ಅನುದಾನ ನೀಡದಿರುವ ಸಣ್ಣ ಮನಸ್ಸಿನ ಅಥವಾ ಭೇದ-ಭಾವದ ಧೋರಣೆಯನ್ನು ಕಾಂಗ್ರೆಸ್ ಸರ್ಕಾರ ಮಾಡಿಲ್ಲ. ಎಲ್ಲ ರೀತಿಯ ಅನುದಾನವನ್ನು ಕೊಡಲಾಗಿದೆ. ಇತಿಹಾಸದಲ್ಲೇ ಪ್ರಥಮ ಬಾರಿಗೆ ಸರ್ಕಾರದ ನಿರ್ಧಾರ ತೆಗೆದುಕೊಳ್ಳುವ ಅತ್ಯುನ್ನತ ಸಭೆಯನ್ನು ಕರಾವಳಿಯಲ್ಲಿ ನಡೆಸಲಾಗಿದೆ. ಇದಕ್ಕೂ ಮೊದಲೇ ಕರಾವಳಿಯ ಬೇಡಿಕೆಗಳ ಬಗ್ಗೆ ತಿಳಿದು ಘೋಷಣೆ ಮಾಡಲಾಗಿದೆ'' ಎಂದು ತಿಳಿಸಿದರು.

ಉಡುಪಿಯ ಪ್ರಮುಖ ಕಾಂಗ್ರೆಸ್ ಮುಖಂಡ ಅಮೃತ್ ಶೆಣೈ

''2013ರಲ್ಲಿ ಅವಿಭಜಿತ ದಕ್ಷಿಣ ಕನ್ನಡದಲ್ಲಿ ಉಡುಪಿಯಲ್ಲಿ ಮೂರು, ದಕ್ಷಿಣ ಕನ್ನಡದಲ್ಲಿ ಏಳು ಕಾಂಗ್ರೆಸ್ ಶಾಸಕರು ಗೆದ್ದಿದ್ದರು. ಅಂದರೆ ಬರೀ 13 ವರ್ಷಗಳ ಹಿಂದೆ. ಆಗಿನ ಮತದಾರರಲ್ಲಿ ಬರೀ ಶೇಕಡ ಐದರಷ್ಟು ಮತದಾರರು ಸಾವನ್ನಪ್ಪಿರಬಹುದು. ಇನ್ನುಳಿದ ಮತದಾರರು ಜೀವಂತವಾಗಿದ್ದಾರೆ. ಆದರೆ ಮೋದಿ ಭಾಷಣವನ್ನು ನಂಬಿ, ಅವರ ವೇಷಭೂಷಣಗಳನ್ನು ನೋಡಿ, ಅವರು ಹೊಸ ಲೋಕವನ್ನೇ ಕಾಲ ಬುಡಕ್ಕೆ ತಂದಿಡುತ್ತಾರೆ ಎಂಬ ಭ್ರಮೆಯಲ್ಲಿ 10-12 ವರ್ಷ ಖಂಡಿತವಾಗಿ ಬಿಜೆಪಿಗೆ ಮತ ಹಾಕಿದ್ದಾರೆ. ಆದರೆ ಡಿ ಕೆ ಶಿವಕುಮಾರ್ ಅವರು ಎಲ್ಲ ಮತದಾರರ ಮನವನ್ನು ಗೆದ್ದಿರುವುದು ಮೇಲ್ನೋಟಕ್ಕೆ ತೋರುತ್ತಿದೆ. ಕರಾವಳಿ ಎಂದರೆ ಧಾರ್ಮಿಕ ಮನೋಭಾವದ ಜನರು ಹೆಚ್ಚು. ಸಿಎಂ ಭಕ್ತಿ ತೋರಿಸುವ ರೀತಿ, ಧಾರ್ಮಿಕ ಪ್ರವೃತ್ತಿಯಿಂದ ಈ ಜನರ ಮೆಚ್ಚುಗೆ ಗಳಿಸಿದ್ದಾರೆ, ಜನರಿಗೆ ತುಂಬ ಹತ್ತಿರವಾಗಿದ್ದಾರೆ. ಮುಂದೆ ಕರಾವಳಿಯಲ್ಲೂ ಕಾಂಗ್ರೆಸ್ ಶಾಸಕರು ಗೆದ್ದು ಬರಲಿದ್ದಾರೆ'' ಎಂದು ಭರವಸೆ ವ್ಯಕ್ತಪಡಿಸಿದರು.

ಹೀಗೆ ಕರಾವಳಿಯಲ್ಲಿ ಹಿಂದುತ್ವ ಹಾಗೂ ಕೋಮು ಧ್ರುವೀಕರಣವನ್ನು ಮೆಟ್ಟಿ ನಿಲ್ಲಲು ಕಾಂಗ್ರೆಸ್‌ಗೆ ಈ ಅಭಿವೃದ್ಧಿ ರಾಜಕಾರಣ ಪ್ರಬಲ ಅಸ್ತ್ರವಾಗಲಿದೆ. ಉಸ್ತುವಾರಿ ಸಚಿವರಾದ ಯು.ಟಿ. ಖಾದರ್, ಶಾಸಕ ಅಶೋಕ್ ಕುಮಾರ್ ರೈ ಮುಂತಾದವರ ಕೈಯನ್ನು ಈ ನಿರ್ಧಾರಗಳು ಬಲಪಡಿಸಲಿವೆ. ತುಳು ಭಾಷೆಯ ಮಾನ್ಯತೆ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಹೆಸರನ್ನು ಮಂಗಳೂರು ಜಿಲ್ಲೆ ಎಂದು ಬದಲಾಯಿಸುವ ಸಾರ್ವಜನಿಕ ಅಭಿಪ್ರಾಯ ಸಂಗ್ರಹದ ಘೋಷಣೆ ಕಾಂಗ್ರೆಸ್‌ಗೆ ಕರಾವಳಿ ಪರ ಎಂಬ ಇಮೇಜ್ ತಂದುಕೊಡುತ್ತದೆ ಎಂಬ ಅಭಿಪ್ರಾಯ ಹಲವರದ್ದು.

ಆದರೆ ಕೇವಲ ಸಂಪುಟ ಸಭೆಯ ಘೋಷಣೆಯಾದರೆ ಸಾಲದು; ಅನುದಾನ ಬಿಡುಗಡೆಯಾಗಬೇಕು, ಟೆಂಡರ್ ಪ್ರಕ್ರಿಯೆ ಮುಗಿದು ಕಾಮಗಾರಿಗಳು ನೆಲಮಟ್ಟದಲ್ಲಿ ಆರಂಭವಾಗಬೇಕು. ಕೆಲಸ ವಿಳಂಬವಾದರೆ ಜನರಲ್ಲಿ ನಿರಾಸೆ ಮೂಡುವುದು ಖಂಡಿತ. ಈ ರಾಜಕೀಯ ಲಾಭವು ಚುನಾವಣೆಯಲ್ಲಿ ಮತಗಳಾಗಿ ಬದಲಾಗಬೇಕಾದರೆ, ಘೋಷಿಸಿದ ಯೋಜನೆಗಳು ನಿಗದಿತ ಸಮಯದೊಳಗೆ ಕಾರ್ಯರೂಪಕ್ಕೆ ಬರಬೇಕಾದುದು ಅತ್ಯಗತ್ಯ. ಅದರೊಂದಿಗೆ ಕರಾವಳಿಯಲ್ಲಿ ಮತದಾನದ ಶೈಲಿ ಹೆಚ್ಚಾಗಿ ಸಿದ್ಧಾಂತ ಆಧಾರಿತವಾಗಿರುತ್ತದೆ. ಕೇವಲ ಹಣಕಾಸು ಅನುದಾನಗಳಿಂದ ತಕ್ಷಣಕ್ಕೆ ಮತದಾರರ ಮನಸ್ಸು ಬದಲಾಯಿಸುವುದು ಸವಾಲಿನ ಕೆಲಸ.

ಮುಂಬೈ ಗರ್ಬಾ ಉತ್ಸವಕ್ಕೆ ಮುಸ್ಲಿಮರ ಪ್ರವೇಶಕ್ಕೆ ನಿರ್ಬಂಧ: ತಿಲಕ, ಆಧಾರ್ ಕಾರ್ಡ್ ಹಾಗೂ ಕುಟುಂಬ ಸಮೇತ ಆಗಮನ ಕಡ್ಡಾಯ!

ಮುಂಬೈನ ಬೋರಿವಲಿಯಲ್ಲಿ ಆಯೋಜಿಸಲಾಗುತ್ತಿರುವ ಮುಂಬರುವ ನವರಾತ್ರಿ, ಗರ್ಬಾ ಮತ್ತು ದಾಂಡಿಯಾ ಉತ್ಸವದಲ್ಲಿ ಮುಸ್ಲಿಂ ಸಮುದಾಯದ ಪ್ರವೇಶಕ್ಕೆ ಕಠಿಣ ನಿಯಮಗಳನ್ನು ವಿಧಿಸಲಾಗಿದ್ದು, ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ. ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ನೀಡಿದ್ದ ನಿರ್ದೇಶನಗಳ ಬೆನ್ನಲ್ಲೇ, ಸ್ಥಳೀಯ ಬಿಜೆಪಿ ಶಾಸಕ ಸಂಜಯ್ ಉಪಾಧ್ಯಾಯ ಹಾಗೂ ಸಂಘಟಕರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಬಯಸುವ ಪ್ರತಿಯೊಬ್ಬರಿಗೂ ಹೊಸ ಮಾರ್ಗದರ್ಶಿ ಸೂತ್ರಗಳನ್ನು ಪ್ರಕಟಿಸಿದ್ದಾರೆ. ಈ ಮಾರ್ಗಸೂಚಿಗೆ ತೀವ್ರ ವಿರೋಧ ವ್ಯಕ್ತವಾಗಿದೆ.

ಗರ್ಬಾ ಮಂಟಪ ಪ್ರವೇಶಿಸುವ ಪ್ರತಿಯೊಬ್ಬ ವ್ಯಕ್ತಿಯ ಗುರುತನ್ನು ಆಧಾರ್ ಕಾರ್ಡ್ ಅಥವಾ ಅಧಿಕೃತ ಗುರುತಿನ ಚೀಟಿಯ ಮೂಲಕ ಪರಿಶೀಲಿಸಲಾಗುತ್ತದೆ. ಪ್ರವೇಶ ದ್ವಾರದಲ್ಲೇ ಕಡ್ಡಾಯವಾಗಿ ನೊಸಲಿಗೆ ತಿಲಕವನ್ನು ಇಡಲಾಗುತ್ತದೆ. ಅನ್ಯಧರ್ಮೀಯರು ಅಥವಾ ಮುಸ್ಲಿಂ ಸಮುದಾಯಕ್ಕೆ ಸೇರಿದವರು ಭಾಗವಹಿಸುವುದಾದರೆ, ಅವರು ತಮ್ಮ ಕುಟುಂಬದ ಸದಸ್ಯರೊಂದಿಗೆ (ಪತ್ನಿ, ಸಹೋದರಿ ಅಥವಾ ಕುಟುಂಬದೊಂದಿಗೆ) ಮಾತ್ರ ಆಗಮಿಸಬೇಕು ಎಂದು ಶಾಸಕ ಸಂಜಯ್ ಉಪಾಧ್ಯಾಯ ಹಾಗೂ ಸಂಘಟಕರು ಹೇಳಿದ್ದಾರೆ.

ಗರ್ಬಾ ಕೇವಲ ನೃತ್ಯ ಹಾಗೂ ಮನರಂಜನೆಯಲ್ಲ, ಅದು ನವದುರ್ಗೆಯ ಆರಾಧನೆಯಾಗಿದೆ. ಹೀಗಾಗಿ ದೇವಿಯ ಪೂಜೆ ಹಾಗೂ ವಿಗ್ರಹಾರಾಧನೆಯಲ್ಲಿ ನಂಬಿಕೆ ಉಳ್ಳವರಿಗೆ ಮಾತ್ರ ಪ್ರವೇಶ ನೀಡಲಾಗುತ್ತದೆ ಎಂದು ಆಯೋಜಕರು ಪ್ರತಿಪಾದಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR